# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | Volume - 01
ಸಂಚಿಕೆ – 108 | Issue - 108
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 07–11–2023 ಮಂಗಳವಾರ | Date: 07-11-2023 Tuesday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



**ಒಳಪುಟದ ಸುದ್ದಿಗಳು**

ಕುಷ್ಟರೋಗ ಶೀಘ್ರಪತ್ತೆ ಹಚ್ಚಿ ಚಿಕಿತ್ಸೆ ನೀಡಿ, ಅಂಗವಿಕಲತೆ ತಪ್ಪಿಸಿ 2

ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಎಬಿವಿಪಿ ಹೋರಾಟ 3

ಜಂಗಮಪ್ರೇಮಿ ಎಂದರೆ ಖಾವಿ ಹಾಕಿದವರಲ್ಲ ಆಚಾರ ಉಳ್ಳವರು ಜಂಗಮರು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಒನಕೆ ಓಬವ್ವ ಜಯಂತಿ: ನ.7ರಂದು ಪೂರ್ವಸಭೆ

» ಚಿತ್ರದುರ್ಗ

ನವೆಂಬರ್ 11ರಂದು ಒನಕೆ ಓಬವ್ವ ಜಯಂತಿ ಆಚರಿಸುವ ಸಂಬಂಧ ಅಗತ್ಯ ಪೂರ್ವ ಸಿದ್ಧತೆ ಕೈಗೊಳ್ಳುವ ಬಗ್ಗೆ ಚರ್ಚಿಸಲು ಇದೇ ನವೆಂಬರ್ 7ರಂದು ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸಭೆಯ ಅಧ್ಯಕ್ಷತೆ ವಹಿಸುವರು. ಜಿಲ್ಲಾಮಟ್ಟದ ಅಧಿಕಾರಿಗಳು, ಸಮಾಜದ ಮುಖಂಡರು ಸಭೆಗೆ ಆಗಮಿಸಿ ಸಲಹೆ ಸೂಚನೆ ನೀಡಲು ಭಾಗವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

### ವಿಕಲಚೇತನರಿಗೆ ವಿವಿಧ ಸೌಲಭ್ಯ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಚಿತ್ರದುರ್ಗ

2023–24ನೇ ಸಾಲಿನ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ 8 ಯೋಜನೆಗಳಡಿ ಸೌಲಭ್ಯಕ್ಕಾಗಿ ಆನ್‍ಲೈನ್ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ನವೆಂಬರ್ 15 ರವರೆಗೆ ವಿಸ್ತರಿಸಲಾಗಿದೆ.ಆಧಾರ ಯೋಜನೆ, ಮೆರಿಟ್ ವಿದ್ಯಾರ್ಥಿಗಳಿಗಾಗಿ ಪ್ರೋತ್ಸಾಹಧನ ಯೋಜನೆ, ಮರಣ ಪರಿಹಾರ ನಿಧಿ (ಎಂಆರ್‍ಡಬ್ಲ್ಯೂ, ವಿಆರ್‍ಡಬ್ಲ್ಯೂ), ವೈದ್ಯಕೀಯ ಪರಿಹಾರ ನಿಧಿ, ನಿರುದ್ಯೋಗ ಭತ್ಯೆ, ಪ್ರತಿಭೆ ಯೋಜನೆ, ಸಾಧನೆ ಯೋಜನೆ, ಶಿಶುಪಾಲನಾ ಭತ್ಯೆ ಸೇರಿದಂತೆ ಒಟ್ಟು 8 ಯೋಜನೆಗಳಿಗೆ ಸುವಿಧಾ ತಂತ್ರಾಂಶದಡಿ ವಿಕಲಚೇತನರಿಂದ ಆನ್‍ಲೈನ್ ಮೂಲಕ ಅರ್ಜಿ ಅರ್ಜಿಸಲ್ಲಿಸಲು, ನವೆಂಬರ್ 15 ರವರೆಗೆ ಅವಧಿ ವಿಸ್ತರಿಸಲಾಗಿದೆ. ಜಿಲ್ಲೆಯ ವಿಕಲಚೇತನ ವ್ಯಕ್ತಿಗಳು ವೆಬ್‍ಸೈಟ್ https://sevasindhu.karnataka.gov.in/sevasindhu/DepartmentService ನಲ್ಲಿ ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲಾತಿಯೊಂದಿಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ಒಂದು ಹಾರ್ಡ್ ಪ್ರತಿಯನ್ನು ಆಯಾ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಬೇಕು. ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರ ದೂರವಾಣಿ ಸಂಖ್ಯೆ ಚಿತ್ರದುರ್ಗ–9880821934, ಚಳ್ಳಕೆರೆ–9611266930, ಹಿರಿಯೂರು–9902888901, 9902898901, ಹೊಳಲ್ಕೆರೆ–9740030227, ಹೊಸದುರ್ಗ–9741829990, ಮೊಳಕಾಲ್ಮೂರು–9742725576 ಗೆ ಸಂಪರ್ಕಿಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಬಾಲಭವನ ಆವರಣ, ಸ್ಟೇಡಿಯಂ ಹತ್ತಿರ, ಚಿತ್ರದುರ್ಗ ದೂರವಾಣಿ ಸಂಖ್ಯೆ 08194–235284 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

### ಹೊಳಲ್ಕೆರೆಯಲ್ಲಿ 86.8 ಮಿ.ಮೀ ಮಳೆ

■ ಚಿತ್ರದುರ್ಗ

ಸೋಮವಾರ ಸುರಿದ ಮಳೆಯ ವಿವರದನ್ವಯ ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆಯಲ್ಲಿ 86.8 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯ ಅತ್ಯಧಿಕ ಮಳೆಯಾಗಿದೆ.ಹೊಳಲ್ಕೆರೆ ತಾಲ್ಲೂಕಿನ ರಾಮಗಿರಿಯಲ್ಲಿ 49.4 ಮಿ.ಮೀ, ಚಿಕ್ಕಜಾಜೂರು 18.5 ಮಿ.ಮೀ, ಬಿ. ದುರ್ಗ 22 ಮಿ.ಮೀ, ಹೆಚ್‍ಡಿ ಪುರ 36 ಮಿ.ಮೀ, ತಾಳ್ಯ 8.2 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ–1ರಲ್ಲಿ 3.6 ಮಿ.ಮೀ, ಚಿತ್ರದುರ್ಗ–2ರಲ್ಲಿ 21.6 ಮಿ.ಮೀ, ಐನಹಳ್ಳಿ 31.4 ಮಿ.ಮೀ, ಭರಮಸಾಗರ 8.4 ಮಿ.ಮೀ, ತುರುವನೂರು 2.6 ಮಿ.ಮೀ, ಸಿರಿಗೆರೆ 78 ಮಿ.ಮೀ, ಹಿರೇಗುಂಟನೂರು 3 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 24.9 ಮಿ.ಮೀ, ಬಾಗೂರು 7.4 ಮಿ.ಮೀ, ಮತ್ತೋಡು 13.4 ಮಿ.ಮೀ, ಶ್ರೀರಾಂಪುರ 50 ಮಿ.ಮೀ, ಮಾಡದಕೆರೆ 26 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮೂರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 39.2 ಮಿ.ಮೀ, ರಾಯಾಪುರ 23 ಮಿ.ಮೀ, ಬಿಜಿಕೆರೆ 3.4 ಮಿ.ಮೀ, ರಾಂಪುರ 27 ಮಿ.ಮೀ, ದೇವಸಮುದ್ರ 51.2 ಮಿ.ಮೀ ಮಳೆಯಾಗಿದೆ. ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 4 ಮಿ.ಮೀ, ಮಳೆಯಾಗಿದೆ.

# ಅಧಿಕಾರಿಗಳೇ ಜನರ ಸಮಸ್ಯೆ ನಿವಾರಣೆಗೆ ಕೆಲಸ ಮಾಡಿ: ಶಾಸಕ ರಘುಮೂರ್ತಿ

» ಚಳ್ಳಕೆರೆ

ಗ್ರಾಮೀಣ ಭಾಗದ ಜನರು ಪ್ರತಿನಿತ್ಯ ಹಲವಾರುಸಮಸ್ಯೆಗಳಿಂದಪರಿತಪಿಸುವರು. ಅವರಿಗೆ ತಾಲ್ಲೂಕು ಮಟ್ಟದಲ್ಲಿ ಕೆಲಸ ಕಾರ್ಯಗಳು ಸುಗಮವಾಗಿ ಆಗಬೇಕಿದೆ. ಆದರೆ, ಅಧಿಕಾರಿ ವರ್ಗ ಮಾತ್ರ ಜನರ ಸಮಸ್ಯೆಗಳಿಗೆ ಸ್ಪಂದಿಸಲು ಹಿಂದೇಟು ಹಾಕುವುದು ಸರಿಯಲ್ಲವೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು ರಾಮಜೋಗಿಹಳ್ಳಿ ಗ್ರಾಮ ಪಂಚಾಯಿತಿ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ ಜನಸಂಪರ್ಕ ಸಭೆಯನ್ನು ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈಗಾಗಲೇ ಸುಮಾರು 17 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜನಸಂಪರ್ಕ ಸಭೆ ನಡೆಸಿ ಜನರ ಸಮಸ್ಯೆಗಳಿಗೆ ಸ್ಪಂದಿಸಲಾಗಿದೆ. ಆದರೂ ಸಹ ನಿರೀಕ್ಷಿತ ಮಟ್ಟದಲ್ಲಿ ಅಧಿಕಾರಿ ವರ್ಗದಿಂದ ಕೆಲಸ ಕಾರ್ಯಗಳು ಆಗುತ್ತಿಲ್ಲ. ಇನ್ನೂ ಸಹ ಜನರು ನಿರಾಸೆಯಿಂದಲೇ ಇದ್ದಾರೆ, ತಾಲ್ಲೂಕು ಮಟ್ಟದಲ್ಲಿ ನಮ್ಮ ಕೆಲಸ ಆಗುವುದಿಲ್ಲವೆಂಬ ಕಹಿ ಭಾವನೆ ಅವರಲ್ಲಿದೆ. ಆದ್ದರಿಂದ ಅಧಿಕಾರಿ ವರ್ಗ ಸಮರೋಪಾದಿಯಲ್ಲಿ ಜನರ ಸಮಸ್ಯೆಗಳಿಗೆ ಸ್ಪಂದಿಸಲು ಮುಂದಾಗಬೇಕು ಎಂದರು.



- ಜನರ ಸಮಸ್ಯೆಗೆ ಜನಸಂಪರ್ಕ ಸಭೆಯಲ್ಲಿ ಪರಿಹಾರ ಒದಗಿಸಲು ಕ್ರಮ
- ತಾಲೂಕು ಕೇಂದ್ರಕ್ಕೆ ಬರುವ ಜನರ ಸಮಸ್ಯೆಗೆ ಸ್ಪಂದಿಸಲು ಅಧಿಕಾರಿಗಳಿಗೆ ಸೂಚನೆ.
- ತಾಲೂಕು ಮಟ್ಟದ ಅಧಿಕಾರಿಗಳು ಸ್ಪಂದಿಸದಿದ್ದರೆ ಸೂಕ್ತ ಕ್ರಮ.
- ಸಾರ್ವಜನಿಕರ ದೂರುಗಳಿಗೆ ಕಡಿವಾಣ ಹಾಕಿ
- ಜನರಿಗೆ ಭರವಸೆ ಬರುವಂತೆ ಸಿಬ್ಬಂದಿಗಳು ಕೆಲಸ ಮಾಡಿ

ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ಶಾಸಕರ ಅಧ್ಯಕ್ಷತೆಯಲ್ಲಿ ಕ್ಷೇತ್ರದ ಬಹುತೇಕ ಕಡೆ ಜನಸ್ಪಂದನಾ ಸಭೆ ನಡೆಸಿ ಜನರ ಸಮಸ್ಯೆಗಳನ್ನು ಅರಿತು, ನಿವಾರಿಸುವ ಕಾರ್ಯ ಮುಂದುವರೆದಿದೆ. ಆದರೆ, ಈ ಕಾರ್ಯಕ್ಕೆ ಇನ್ನೂ ಹೆಚ್ಚಿನ ವೇಗದ ಅವಶ್ಯತೆ ಇದೆ. ಆದ್ದರಿಂದ ಈಗಾಗಲೇ ಸಿಬ್ಬಂದಿ ವರ್ಗಕ್ಕೆ ಈ ನಿಟ್ಟಿನಲ್ಲಿ ಸೂಚನೆಗಳನ್ನು ನೀಡಲಾಗಿದೆ. ಗ್ರಾಮೀಣ ಭಾಗದ ಜನರು ತಾಲ್ಲೂಕು ಕೇಂದ್ರಕ್ಕೆ ಬಂದಾಗ ಯಾವುದೇ ಕೆಲಸವಾಗದಿದ್ದರೆ ನನ್ನ ಗಮನಕ್ಕೆ ತಂದರೆ ಸ್ಪಂದಿಸುವ ಭರವಸೆ ನೀಡಿದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಶಶಿಧರ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಧ, ಉಪಾಧ್ಯಕ್ಷೆ ಸುಧಮ್ಮ, ಮಾಜಿ ತಾಲ್ಲೂಕು ಪಂಚಾಯಿತಿ ಅಧ್ಯಕ್ಷ ಜಿ.ಟಿ.ತಿಪ್ಪೇಶ್, ಗ್ರಾಮದ ಮುಖಂಡರಾದ ಸುರೇಶ್‍ಬಾಬು, ಪುರುಷೋತ್ತಮ್, ಉಮಾಕಾಂತರೆಡ್ಡಿ, ಚಂದ್ರಪ್ಪ ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.



“ ಜನರು ತಾಲೂಕು ಕೇಂದ್ರಗಳಿಗೆ ಬಂದಾಗ ಅನಗತ್ಯ ಓಡಾಡಿಸದೇ ಕೆಲಸ ಮಾಡಿ ಕೊಡಬೇಕು. ಗ್ರಾಮೀಣ ಭಾಗದ ಜನರು ನಿತ್ಯ ಕೆಲಸ ಕಾರ್ಯಗಳು ಬಿಟ್ಟು ತಾಲೂಕು ಕೇಂದ್ರಕ್ಕೆ ಬರುತ್ತಾರೆ. ಅಧಿಕಾರಿಗಳು ಅವರಿಗೆ ಸ್ಪಂದಿಸಿ ಕೆಲಸ ಮಾಡಿ. ನನಗೆ ಸಾರ್ವಜನಿಕರಿಂದ ದೂರುಗಳು ಬಂದರೆ ಸಹಿಸುವುದಿಲ್ಲ. ಇನ್ನು ಮುಂದೆ ಜನರ ಸಮಸ್ಯೆಗಳ ನಿವಾರಣೆಗೆ ಸಾಗರೋಪಾದಿಯಲ್ಲಿ ಕೆಲಸ ಮಾಡಿ.

» **ಟಿ.ರಘುಮೂರ್ತಿ ಶಾಸಕರು ಚಳ್ಳಕೆರೆ ಕ್ಷೇತ್ರ**

# ಪಂಪ್‌ಸೆಟ್‌ಗಳಿಗೆ 7 ಗಂಟೆ ವಿದ್ಯುತ್ ಸರಬರಾಜು

## ಇಂಧನ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ

» ಜನಾಶಯಪ್ರಭ ಬೆಂಗಳೂರು

ರಾಜ್ಯದಲ್ಲಿ ನೀರಾವರಿ ಪಂಪ್‍ಸೆಟ್‍ಗಳಿಗೆ 7 ಗಂಟೆಗಳ ವಿದ್ಯುತ್ ಸರಬರಾಜು ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಇಂಧನ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ನಂತರ ಈ ವಿಷಯ ತಿಳಿಸಿದರು.

ರಾಜ್ಯದಲ್ಲಿ ವಿದ್ಯತ್ ಕೊರತೆಯಿದೆ ಎಂದು ನೀರಾವರಿ ಪಂಪ್‍ಸೆಟ್‍ಗಳಿಗ ಏಳು ಗಂಟೆಗಳ ಕಾಲ ನೀರಾವರಿ ಪಂಪ್‍ಸೆಟ್‍ಗಳಿಗ ವಿದ್ಯುತ್ ನೀಡಲು ಮೊದಲೇ ಘೋಷಣೆ ಮಾಡಿದ್ದೆವು. ಕೆಲವು ಜನ ಸತತವಾಗಿ ಮೂರು ಫೇಸ್‍ನಲ್ಲಿ 5 ಗಂಟೆ ವಿದ್ಯುತ್ ನೀಡಿದರೆ ಸಾಕು ಎಂದಿದ್ದರು. ಅದಕ್ಕಾಗಿ 5 ಗಂಟೆಗಳ ಕಾಲ 3 ಫೇಸ್‍ನಲ್ಲಿ ವಿದ್ಯುತ್ ನೀಡುವಂತೆ ಸೂಚನೆ ನೀಡಲಾಗಿತ್ತು. ರಾಯಚೂರು, ಕೊಪ್ಪಳ, ಬಳ್ಳಾರಿ, ಯಾದಗಿರಿ ರೈತರು ಭೇಟಿ ಮಾಡಿ ಭತ್ತ ಬೆಳೆಯುವುದರಿಂದ 5 ಗಂಟೆಗಳ ಕಾಲ ವಿದ್ಯುತ್ ನೀಡುವುದು ಸಾಕಾಗುವುದಿಲ್ಲ, 7 ಗಂಟೆಗಳ ಕಾಲ ನೀಡಬೇಕೆಂದು ಎಂದು ಮನವಿ ಮಾಡಿದರು.



ಕಬ್ಬು ಹಾಗೂ ಭತ್ತ ಕಟಾವಿಗೆ ಬಂದಿರುವುದರಿಂದ ಈ ಭಾಗದಲ್ಲಿ 7 ಗಂಟೆಗಳ ಕಾಲ ವಿದ್ಯುತ್ ನೀಡಬೇಕು ಎಂದು ಸೂಚನೆ ನೀಡಲಾಗಿದೆ. ಉಳಿದ ಭಾಗಗಳಿಗೆ ನೀಡುತ್ತಿದ್ದ 5 ಗಂಟೆಗಳ ವಿದ್ಯುತ್ ನ್ನು 7 ಗಂಟೆಗಳ ಕಾಲ ನೀಡಲು ಸಾಧ್ಯವಾಗುತ್ತದೆ ಎಂದು ಇಂದಿನ ಸಭೆಯಲ್ಲಿ ಅಭಿಪ್ರಾಯಕ್ಕೆ ಬರಲಾಗಿದೆ ಎಂದರು.

ರಾಯಚೂರು, ಬಳ್ಳಾರಿಯಲ್ಲಿ ಥರ್ಮಲ್ ಘಟಕಗಳಿದ್ದು, ರಾಜ್ಯದಲ್ಲಿ ಥರ್ಮಲ್, ಜಲವಿದ್ಯುತ್, ಸೋಲಾರ್ ಮೂಲಕ ವಿದ್ಯುತ್ ಉತ್ಪಾದಿಸುತ್ತಿದ್ದು. ಥರ್ಮಲ್ ಘಟಕವು 1000 ಮೆಗಾ ವ್ಯಾಟ್ ಉತ್ಪಾದಿಸುತ್ತಿದೆ. ಸುಮಾರು 2400 ರಿಂದ 3200 ಮೆ.ವ್ಯಾ, ವಿದ್ಯುತ್ ಉತ್ಪಾದನೆ ಹೆಚ್ಚಾಗಿದೆ. ಕಬ್ಬು ಅರೆಯುವುದು ಪ್ರಾರಂಭವಾಗಿ ಕೋ–ಜನರೇಷನ್ ಆಗಿರುವುದರಿಂದ 450 ಮೆ.ವ್ಯಾಟ್ ಉತ್ಪಾದನೆಯಾಗಿದೆ. ಕೂಡ್ಲಗಿಯಲ್ಲಿ 150 ಮೆ. ವ್ಯಾ ಕರ್ನಾಟಕಕ್ಕೆ ಉಳಿತಾಯವಾಗಲಿದೆ ಹಾಗೂ ಖರೀದಿ ಮಾಡುತ್ತಿರುವುದರಿಂದ ಹೆಚ್ಚು ವಿದ್ಯುತ್ ದೊರೆಯಲಿದೆ. ಹಾಗಾಗಿ ಇಂದಿನಿಂದ 7 ತಾಸು ವಿದ್ಯುತ್‍ನ್ನು ಪಂಪ್‍ಸೆಟ್‍ಗಳಿಗೆ ನೀಡುತ್ತಿದ್ದೇವೆ. ಕೈಗಾರಿಕೆಗಳಿಗೆ, ಗೃಹಬಳಕೆಗೆ ವಿದ್ಯುತ್ ಕಡಿತ ಮಾಡಲಾಗುತ್ತಿಲ್ಲ. ಪಂಪ್‍ಸೆಟ್‍ಗಳಿಗೆ ನೀಡುವ ವಿದ್ಯುತ್ ಸಹಾಯಧನವನ್ನು ಸರ್ಕಾರವೇ ನೀಡಿದೆ. 13100 ಕೋಟಿ ರೂ.ಗಳನ್ನು ಬಜೆಟ್‍ನಲ್ಲಿ ಒದಗಿಸಲಾಗಿದೆ ಎಂದರು.

ಭಾಗ್ಯಜ್ಯೋತಿ, ಕುಟೀರ ಜ್ಯೋತಿಗೆ 18 ಯೂನಿಟ್‍ಗಳ ಮಿತಿಯಿತ್ತು.


ಪುಟ ↘ 2


# ಕೌಟುಂಬಿಕ ಕಲಹ ತಂದೆಯನ್ನೇ ಕೊಂದ ಮಗ

» ಚಿತ್ರದುರ್ಗ

ಕೌಟುಂಬಿಕಕಲಹದಹಿನ್ನಲೆಯಲ್ಲಿ ಮಗನೆ ತನ್ನ ತಂದೆಯನ್ನು ಹತ್ಯೆ ಮಾಡಿ, ನಂತರ ಪೊಲೀಸ್ ಠಾಣೆಗೆ ಬಂದು ಶರಣಾಗಿರುವ ಘಟನೆ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ವರವು ಕಾವಲು ಬಳಿ ಇಂದು ಮುಂಜಾನೆ ನಡೆದಿದೆ.

ಸೂರಯ್ಯ(55) ಮಗನಿಂದಲೇ ಕೊಲೆಯಾದ ಮೃತ ವ್ಯಕ್ತಿ. ಚಳ್ಳಕೆರೆ ತಾಲೂಕಿನ ಹೊಸುರು ತಾಂಡ ಗ್ರಾಮದ ನಿವಾಸಿಯಾದ ಸೂರಯ್ಯ ತನ್ನ ಮಗ ಮೋಹನನೊಂದಿಗೆ ವಾಸವಿದ್ದು, ನಿನ್ನೆ ಸಂಜೆ ಚಳ್ಳಕೆರೆ ತಾಲೂಕಿನ ವರವು ಕಾವಲಿಗೆ ಹೋಗಿದ್ದಾರೆ. ನಿನ್ನೆ ತಡರಾತ್ರಿ ಕುಡಿದ ಮತ್ತಿನಲ್ಲಿ ತಂದೆ– ಮಗನ ನಡುವೆ ಜಗಳ ನಡೆದಿದ್ದು, ಇಂದು ಮುಂಜಾನೆ ಮೋಹನ್ ಕುಡಿದ ಅಮಲಿನಲ್ಲಿ ತಂದೆ ಸೂರಯ್ಯ ಅವರ ತಲೆ ಮೇಲೆ ಕಲ್ಲು ಎತ್ತಿಹಾಕಿ ಹತ್ಯೆ ಮಾಡಿದ್ದಾನೆ. ಹತ್ಯೆ ಬಳಿಕ ಚಳ್ಳಕೆರೆ ಠಾಣೆಗೆ ಬಂದು ಕೊಲೆ ಮಾಡಿರುವುದಾಗಿ ತಪ್ಪೊಪ್ಪಿಕೊಂಡು ಶರಣಾಗಿದ್ದಾನೆ. ಸ್ಥಳಕ್ಕೆ ಸಿಪಿಐ ಸಮೀವುಲ್ಲಾ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.



ಈ ಬಗ್ಗೆ ನಾಯಕನಹಟ್ಟಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

**ಪ್ರಮುಖ ಸುದ್ದಿ**

## ಪರಿಸರ ಸ್ನೇಹಿ ದೀಪಾವಳಿ ಆಚರಣೆಗೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮನವಿ

# ಹಸಿರು ಪಟಾಕಿ ಮಾತ್ರ ಬಳಕೆ ಮತ್ತು ಮಾರಾಟಕ್ಕೆ ಅವಕಾಶ

» ಚಿತ್ರದುರ್ಗ

ದೀಪಾವಳಿಯು ಬೆಳಕಿನ ಹಬ್ಬವಾಗಿದ್ದು, ದೀಪಾವಳಿಹಬ್ಬವನ್ನುಪರಿಸರಸ್ನೇಹಿಯಾಗಿ ಸರಳ ರೀತಿಯಲ್ಲಿ ಮಾಲಿನ್ಯ ರಹಿತವಾಗಿ ಮತ್ತು ಭಕ್ತಿಪೂರ್ವಕವಾಗಿ ಆಚರಿಸಬೇಕು, ಹಸಿರು ಪಟಾಕಿಯನ್ನು ಹೊರತುಪಡಿಸಿ, ಇತರೆ ಪಟಾಕಿಯ ಬಳಕೆ ಮತ್ತು ಮಾರಾಟವನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ತಿಳಿಸಿದ್ದಾರೆ.

ಪ್ರತಿ ವರ್ಷದಂತೆ ಈ ವರ್ಷವೂ ದೀಪಾವಳಿಯನ್ನು ಜಿಲ್ಲೆಯಾದ್ಯಂತ ಸಡಗರದಿಂದ ಆಚರಿಸಲಾಗುತ್ತಿದ್ದು, ಹಬ್ಬದ ಸಂದರ್ಭದಲ್ಲಿ ಸಿಡಿಸುವ ಪಟಾಕಿಗಳು ಶಬ್ದ ಮಾಲಿನ್ಯ ಮತ್ತು ವಾಯು ಮಾಲಿನ್ಯ ಉಂಟು ಮಾಡಿ ಪರಿಸರಕ್ಕೆ ಹಾನಿ ಮಾಡುತ್ತಿದೆ ಹಾಗೂ ಜನರ ಆರೋಗ್ಯ ಹದಗೆಡಿಸುತ್ತಿದೆ, ಅಲ್ಲದೆ ಪ್ರಾಣಿ–ಪಕ್ಷಿಗಳ ಕಲರವಕ್ಕೆ ಘಾಸಿ ಉಂಟು ಮಾಡುತ್ತಿದೆ. ಹೀಗಾಗಿ ದೀಪಾವಳಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಸರಳ ರೀತಿಯಲ್ಲಿ ಮಾಲಿನ್ಯ ರಹಿತವಾಗಿ ಮತ್ತು ಭಕ್ತಿ ಪೂರ್ವಕವಾಗಿ ಆಚರಿಸವುದು ಸೂಕ್ತವಾಗಿರುತ್ತದೆ.

**ಹಸಿರು ಪಟಾಕಿ ಬಳಕೆಗೆ ಮಾತ್ರ ಅವಕಾಶ:** ದೀಪಾವಳಿ ಹಬ್ಬ ಆಚರಿಸುವ ಸಂಬಂಧ ಸರ್ವೋಚ್ಛ ನ್ಯಾಯಾಲಯವು ನೀಡಿರುವ ನಿರ್ದೇಶನಗಳಂತೆ ಹಾಗೂ ರಾಜ್ಯ ಸರ್ಕಾರವು ಪಟಾಕಿ ಬಳಕೆ ಕುರಿತಂತೆ ನೀಡಿರುವ ಆದೇಶದ ಮೇರೆಗೆ ಜವಾಬ್ದಾರಿಯುತ ನಾಗರಿಕರು ಮಾರ್ಗಸೂಚಿ ಅನುಸರಿಸುವಂತೆ ಮನವಿ ಮಾಡಿದ್ದಾರೆ. ಸರ್ಕಾರದ ನಿರ್ದೇಶನದಂತೆ ಹಸಿರು ಪಟಾಕಿಗಳನ್ನು ಹೊರತುಪಡಿಸಿ, ಬೇರೆ ಯಾವುದೇ ರೀತಿಯ ಪಟಾಕಿಗಳ ಮಾರಾಟ ಮತ್ತು ಬಳಕೆಯನ್ನು ನಿಷೇಧಿಸಲಾಗಿದೆ.ಹಸಿರು ಪಟಾಕಿಗಳ ಗುರುತಿಸುವಿಕೆ: ಪಟಾಕಿ ಬಾಕ್ಸ್‌ಗಳ ಮೇಲೆ ಕೌನ್ಸಿಲ್ ಆಫ್ ಸೈಂಟಿಫಿಕ್ ಅಂಡ್ ಇಂಡಸ್ಟ್ರಿಯಲ್ ರಿಸರ್ಚ್ ಮತ್ತು ನ್ಯಾಷನಲ್ ಎನ್ವಿರಾನ್‍ಮೆಂಟಲ್ ಇಂಜಿನಿಯರಿಂಗ್ ರಿಸರ್ಚ್ ಇನ್ಸಿಟಿ ಟ್ಯೂಟ್ ಇವರ ಲೋಗೋ ಹಾಗೂ ನೊಂದಿತ ಸಂಖ್ಯೆಯೊಂದಿಗೆ ಮುದ್ರಿತವಾಗಿ ರಬೇಕು. ಅಧಿಕೃತ ಮಾರಾಟಗಾರರು ಸಂಬಂಧಪಟ್ಟ ಇಲಾಖೆ, ಪ್ರಾಧಿಕಾರದಿಂದ ನೀಡುವ ಪರವಾನಗಿಯಲ್ಲಿ ನಿಗಧಿಪಡಿಸಿರುವ ದಿನಾಂಕ ಮತ್ತು ಸ್ಥಳಗಳಲ್ಲಿ ಮಾತ್ರ ತಾತ್ಕಾಲಿಕ ಪಟಾಕಿ ಅಂಗಡಿಗಳನ್ನು ಇಡಬೇಕು.ನಿಷೇಧಿತಪಟಾಕಿಗಳಮಾರಾಟ ಕಂಡುಬಂದಲ್ಲಿ ಅಂತಹ ಪಟಾಕಿಗಳನ್ನು ವಶಪಡಿಸಿಕೊಳ್ಳ ಲಾಗುವುದು ಮತ್ತು ನಿಯಮಗಳನ್ವಯ ಕಾನೂನು ಕ್ರಮ ಕೈಗೊಳ್ಳಲಾಗುವುದು. ಹಬ್ಬದ ಸಮಯದಲ್ಲಿ ರಾತ್ರಿ 8 ಗಂಟೆಯಿಂದ 10 ಗಂಟೆವರೆಗೆ ಮಾತ್ರ ಹಸಿರು ಪಟಾಕಿಗಳನ್ನು ಸ್ಫೋಟಿಸಲು ಅವಕಾಶ ನೀಡಿದ್ದು, ಉಳಿದ ಸಮಯದಲ್ಲಿ ಪಟಾಕಿಗಳ ಸ್ಫೋಟ ನಿಷೇಧಿಸಲಾಗಿದೆ. ರಾತ್ರಿ 10 ಗಂಟೆಯಿಂದ ಬೆಳಿಗ್ಗೆ 6 ಗಂಟೆಯವರೆಗೆ ಪಟಾಕಿ ಸ್ಫೋಟ ಸಂಪೂರ್ಣ ನಿಷೇಧಿಸಲಾಗಿದೆ. 125 ಡೆಸಿಬಲ್‍ಗಳಿಗಿಂತಲೂ ಹೆಚ್ಚಿನ ಶಬ್ದ ಮಾಡುವ ಪಟಾಕಿಗಳನ್ನು ಕೂಡ ನಿಷೇಧಿಸಲಾಗಿದೆ. ಶಿಕ್ಷಣ ಸಂಸ್ಥೆಗಳು, ಆಸ್ಪತ್ರೆ, ವೃದ್ಧಾಶ್ರಮಗಳ ಹತ್ತಿರ ಪಟಾಕಿ ಸಿಡಿಸುವುದನ್ನು ನಿಷೇಧಿಸಲಾಗಿದೆ.



ಈಗಾಗಲೇ ಪರಿಸರ ಅಧಿಕಾರಿಗಳು ಪಟಾಕಿ ಅಂಗಡಿ ಮಾಲೀಕರೊಂದಿಗೆ ಸಭೆ ನಡೆಸಿ, ಕಡ್ಡಾಯವಾಗಿ ಹಸಿರು ಪಟಾಕಿಗಳನ್ನು ಮಾತ್ರ ಮಾರಾಟ ಮಾಡುವಂತೆ ಹಾಗೂ ಸರ್ಕಾರದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚನೆ ನೀಡಲಾಗಿದೆ. ಪರಿಸರ ಮತ್ತು ಸಾರ್ವಜನಿಕರ ಆರೋಗ್ಯ ಹಿತದೃಷ್ಠಿಯಿಂದ ಪರಿಸರಸ್ನೇಹಿ ದೀಪಾವಳಿ ಆಚರಣೆಗಾಗಿ ಜಿಲ್ಲೆಯ ನಾಗರೀಕರ ಸಹಕಾರ ಹಾಗೂ ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಸರ್ವೋಚ್ಛ ನ್ಯಾಯಾಲಯದ ಆದೇಶ ಮತ್ತು ರಾಜ್ಯ ಸರ್ಕಾರದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಲಾಗಿದೆ.

ಸಾಧ್ಯವಾದಷ್ಟು ಹಣತೆ ದೀಪ ಹಚ್ಚುವ ಮೂಲಕ ಬೆಳಕಿನ ಹಬ್ಬ ದೀಪಾವಳಿಯನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮನವಿ ಮಾಡಿದ್ದಾರೆ.

## ಫಾಸ್ಟ್ ನ್ಯೂಸ್

### ಗ್ರಾಮದ ಹಿರಿಯ ಮುಖಂಡ, ಶತಾಯುಷಿ ಚಿಕ್ಕಿರಪ್ಪ ನಿಧನ

» ಚಳ್ಳಕೆರೆ



ತಾಲ್ಲೂಕಿನ ಮೀರಸಾಬಿಹಳ್ಳಿ ಗ್ರಾಮದ ಹಿರಿಯ ಕೃಷಿಕ, ಒಕ್ಕಲಿಗ ಸಮಾಜದ ಹಿರಿಯ ಮುಖಂಡ, ಶತಾಯುಷಿ ಚಿಕ್ಕಿರಪ್ಪ(100) ತಮ್ಮ ಸ್ವಗೃಹದಲ್ಲಿ ಸೋಮವಾರ ಬೆಳಗ್ಗೆ ನಿಧನರಾಗಿರುತ್ತಾರೆ. ನಿವೃತ್ತ ಪ್ರಾಂಶುಪಾಲ ಸಿ.ಶಿವಲಿಂಗಪ್ಪ ಸೇರಿದಂತೆ ಪತ್ನಿ,ಪುತ್ರ, ಪುತ್ರಿ ಹಾಗೂ ಅಪಾರ ಬಂಧುಬಳಗವನ್ನು ಅವರು ಅಗಲಿದ್ದಾರೆ. ಚಿಕ್ಕಿರಪ್ಪನವರ ಅಂತ್ಯಕ್ರಿಯೆ ಗ್ರಾಮದ ಅವರ ತೋಟದಲ್ಲಿ ಮಂಗಳವಾರ ಬೆಳಗ್ಗೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ದಿಢೀರ್ ಅಸ್ವಸ್ಥ ಯುವಕ ಶ್ರೀನಿವಾಸ್ ಸಾವು

» ಚಳ್ಳಕೆರೆ



ನಗರದ ಎಪಿಎಂಸಿ ಮಾರುಕಟ್ಟೆಯ ಗೋಡಾನ್ ಬಳಿ ಮಲಗಿದ್ದ ಶ್ರೀನಿವಾಸ್(25) ಎಂಬ ಯುವಕ ದಿಢೀರ್ ಅಸ್ವಸ್ಥಗೊಂಡು ಮೃತಪಟ್ಟಿರುತ್ತಾನೆ. ಇಲ್ಲಿನ ಮದಕರಿ ನಗರದ ನಿವಾಸಿಯಾದರಾಮಣ್ಣನವರ ಪುತ್ರ ಶ್ರೀನಿವಾಸ್ ಗೋಡಾನ್ ಬಳಿ ಮಲಗಿದ್ದ ಬೆಳಗಿನ ಜಾವ 3.30ಕ್ಕೆ ನನಗೆ ಸುಸ್ತು, ಆಯಾಸ ಹೆಚ್ಚಾಗುತ್ತಿದೆ ಎಂದು ತಿಳಿಸಿದ ಹಿನ್ನೆಲೆಯಲ್ಲಿ ಕೂಡಲೇ ಸ್ಥಳಕ್ಕೆ ಭೇಟಿ ನೀಡಿದ ಕುಟುಂಬದವರು ಸಾರ್ವಜನಿಕ ಆಸ್ಪತ್ರೆಗೆ ದಾಖಲು ಮಾಡಿದಾಗ ಪರಿಶೀಲಿಸಿದ ವೈದ್ಯರು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಚಳ್ಳಕೆರೆ ಪೊಲೀಸರು ಅಸಹಜ ಸಾವಿನ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಪಿ.ಸಿ & ಪಿ.ಎನ್.ಡಿ.ಟಿ ಸಲಹಾ ಸಮಿತಿ ಸಭೆ

» ದಾವಣಗೆರೆ

ಜಿಲ್ಲಾ ಮಟ್ಟದ ಸಲಹಾ ಸಮಿತಿ, ಪಿ.ಸಿ ಮತ್ತು ಪಿ.ಎನ್.ಡಿ.ಟಿ ಇವರ ಅಧ್ಯಕ್ಷತೆಯಲ್ಲಿ ನ.7 ರಂದು ಸಂಜೆ 4 ಗಂಟೆಗೆ ನಗರದ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಪಿ.ಸಿ & ಪಿ.ಎನ್.ಡಿ.ಟಿ ಸಲಹಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ.

### ಮಹರ್ಷಿ ವಾಲ್ಮೀಕಿ ಪ.ಪಂಗಡಗಳ ಅಭಿವೃದ್ಧಿ ನಿಗಮದ ವತಿಯಿಂದ ವಿವಿಧ ಯೋಜನೆಗಳಿಗೆ ಸಾಲ ಸೌಲಭ್ಯ

» ದಾವಣಗೆರೆ

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮವು ಪ್ರಸಕ್ತ ಸಾಲಿಗೆ ವಿವಿಧ ಯೋಜನೆಗಳಿಗೆ ಆನ್‌ಲೈನ್‌ನಿಂದ ಸುವಿಧಾ ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಫಲಾಪೇಕ್ಷಿಗಳು http://sevasindu.karnataka.gov.in ವೆಬ್ ಸೈಟ್‌ನಲ್ಲಿ ನ.29 ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮ ಜಿಲ್ಲಾ ವ್ಯವಸ್ಥಾಪಕರನ್ನು ಅಥವಾ ದೂ.ಸಂ:08192-233309ನ್ನು ಸಂಪರ್ಕಿಸಲು ನಿಗಮದ ವ್ಯವಸ್ಥಾಪಕರು ಬೇಬಿ ಸುನೀತಾ ತಿಳಿಸಿದ್ದಾರೆ.

### ದೇಶಭಕ್ತಿ ಗೀತೆಗಳ ಸಮೂಹ ಗಾಯನ ಸ್ಪರ್ಧೆ

» ಶಿವಮೊಗ್ಗ

ಭದ್ರಾವತಿ ವಾಸು ಸಾರಥ್ಯದ ಭಾವಗಾನ ಸಂಸ್ಥೆಯ 7 ನೇ ವಾರ್ಷಿಕೋತ್ಸವದ ನಿಮಿತ್ತ ಬರುವ ನ.18 ರ ಬೆಳಗ್ಗೆ 9 ಗಂಟೆಯಿಂದ ಮದ್ಯಾಹ್ನ 3.00ಗಂಟೆಯವರೆಗೆ ದೇಶಭಕ್ತಿ ಗೀತೆಗಳ ಸಮೂಹ ಗಾಯನ ಸ್ಪರ್ಧೆಯನ್ನು ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ. ಅಂದು ಬೆಳಗ್ಗೆ ಕಾರ್ಯಕ್ರಮವನ್ನು ಉದ್ಯಮಿ, ಶ್ರೀನಿಧಿ ಸಿಲ್ಕ್ ಅಂಡ್ ಟೆಕ್ಸ್ ಟೈಲ್ಸ್‌ನ ಪಾಲುದಾರರಾದ ಟಿ.ಆರ್. ಅಶ್ವಥ್‌ನಾರಾಯಣ ಶ್ರೇಷ್ಠಿ ಉದ್ಘಾಟಿಸಲಿದ್ದು, ಉದ್ಯಮಿ, ಜಿಲ್ಲಾ ಕೈಗಾರಿಕಾ ಹಾಗೂ ವಾಣಿಜ್ಯ ಸಂಘದ ಅಧ್ಯಕ್ಷ ಗೋಪಿನಾಥ್, ಉದ್ಯಮಿ ಜಿ.ವಿಜಯ್‌ಕುಮಾರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದು, ಸಂಜೆ ನಡೆಯಲಿರುವ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸರ್ಜಿ ಸಮೂಹ ಸಂಸ್ಥೆಗಳ ಡಾ.ಧನಂಜಯ ಸರ್ಜಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಉಮೇಶ್ ಹಲಾಡಿ, ಪತಂಜಲಿ ನಾಗರಾಜ್ ಆಗಮಿಸಲಿದ್ದು, ಈ ಸಂದರ್ಭದಲ್ಲಿ ಕೀ-ಬೋರ್ಡ್ ವಾದಕ ಅಂಥೋಣಿ ಮ್ಯಾಥ್ಯೂವ್, ಜ್ಯೂನಿಯರ್ ವಿಷ್ಣುವರ್ಧನ್ ಖ್ಯಾತಿಯ ಆಪೇಕ್ಷ ಮಂಜುನಾಥ್ ಅವರಿಗೆ ಸನ್ಮಾನಿಲಾಗುವುದು. ಈ ಎರಡು ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಂಡದ ಅಧ್ಯಕ್ಷ ಭದ್ರಾವತಿ ವಾಸು ವಹಿಸಲಿದ್ದಾರೆ. ಸೂಚನೆಗಳು: ಸಮೂಹ ಗಾಯನದಲ್ಲಿ 3ರಿಂದ 5 ಜನರು ಭಾಗವಹಿಸಬಹುದಾಗಿದೆ.

# ಮಕ್ಕಳ ಹಕ್ಕು ರಕ್ಷಣೆಯಲ್ಲಿ ಮಕ್ಕಳು ಭಾಗಿಯಾಗಲಿ

» ಚಿತ್ರದುರ್ಗ

ಮಕ್ಕಳ ಹಕ್ಕುಗಳ ರಕ್ಷಣೆಯಲ್ಲಿ ಮಕ್ಕಳು ಭಾಗಿಯಾಗುವ ಮೂಲಕ ತಮ್ಮ ಸ್ನೇಹಿತರಿಗೆ ನೆರವಾಗಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಸ್. ನಾಗಭೂಷಣ ತಿಳಿಸಿದರು.

ಸೋಮವಾರ ಯುನಿಸೆಫ್, ಕರ್ನಾಟಕ ಮಕ್ಕಳ ಹಕ್ಕುಗಳ ನಿಗಾ ಕೇಂದ್ರ, ಪೀಪಲ್ ಸಂಸ್ಥೆ, ಸ್ಪೈಟ್ಸ್ ಸಂಸ್ಥೆ, ಪರಿವರ್ತನ ಸಂಸ್ಥೆ ಹಾಗೂ ಅಕ್ಷರ ಗ್ರಾಮೀಣ ವಿಕಾಸ ಸಂಸ್ಥೆ, ಮೊಳಕಾಲ್ಮೂರು ಇವರ ಸಹಯೋಗದಲ್ಲಿ ನಗರದ ಪತ್ರಿಕಾ ಭವನದಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ಹಕ್ಕುಗಳ ಸಂಸತ್ ಜಿಲ್ಲಾ ಮಟ್ಟದ ಮಕ್ಕಳ ಸಮಾಲೋಚನೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬಾಬಾ ಸಾಹೇಬ್ ಅಂಬೇಡ್ಕರ್ ರವರು ನಮಗೆ ನೀಡಿದ ಸಂವಿಧಾನದಲ್ಲಿ ಮಕ್ಕಳಿಗಾಗಿ ವಿಶೇಷ ಹಕ್ಕುಗಳನ್ನು ನೀಡಿದ್ದಾರೆ ಸಂವಿಧಾನದ ಆಶಯ ಸಾಕಾರಗೊಳಿಸುವುದು ದೇಶದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಈ ಗುರುತರ ಕಾರ್ಯದಲ್ಲಿ ಸಮುದಾಯದ ಬಹು ಮುಖ್ಯ ಭಾಗವಾಗಿರುವ ಮಕ್ಕಳು ಭಾಗಿಯಾಗಿ ತಮ್ಮ ಹಕ್ಕುಗಳನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು. ಜಿಲ್ಲಾ



ಮಕ್ಕಳ ರಕ್ಷಣಾಧಿಕಾರಿ ಸಿ. ಸವಿತ ಮಾತನಾಡಿ ಪ್ರತಿಯೊಬ್ಬ ಮಕ್ಕಳಿಗೆ ಜೀವಿಸುವ ಬದುಕುವ ಹಕ್ಕಿದೆ ಗ್ರಾಮೀಣ ಪ್ರದೇಶಗಳಲ್ಲಿ ಬಹಳಷ್ಟು ಮಕ್ಕಳು ಬಾಲ್ಯವಿವಾಹ ಲೈಂಗಿಕ ಶೋಷಣೆ ಬಾಲಕಾರ್ಮಿಕದಂತಹ ಸಮಸ್ಯೆಗಳ ಸುಳಿಯಲ್ಲಿ ಸಿಲುಕಿರುತ್ತಾರೆ ಇಂತಹ ಮಕ್ಕಳ ರಕ್ಷಣೆಗಳಿಗಾಗಿಯೇ ಸರ್ಕಾರ 1098 ಉಚಿತ ಸಹಾಯವಾಣಿ ತೆರೆದಿದೆ ಇದರ ಮೂಲಕ ನಿಮ್ಮ ಸಮಸ್ಯೆಗಳನ್ನು ಹೇಳಿದರೆ ತಕ್ಷಣವೇ ನಮ್ಮ ಇಲಾಖೆಯ ಸಿಬ್ಬಂದಿ ನಿಮ್ಮ ಸಹಾಯಕ್ಕೆ ಧಾವಿಸಲಿದೆ ಎಂದು ತಿಳಿಸಿದರು.

ಪೀಪಲ್ ಸಂಸ್ಥೆ ಕಾರ್ಯದರ್ಶಿ ಎಲ್. ಮಂಜುನಾಥ್ ಮಾತನಾಡಿ ನಮ್ಮ ಪ್ರತಿನಿಧಿಸುವ ಜನಪ್ರತಿನಿಧಿಗಳು ಮಕ್ಕಳ ಸಮಸ್ಯೆಗಳನ್ನು ಕುರಿತು ಶಾಸನ ಸಭೆಗಳಲ್ಲಿ ಮಾತನಾಡಿದ ಉದಾಹರಣೆಗಳಿಲ್ಲ ಬರೀ ಅನುದಾನಗಳ ಬಗ್ಗೆಯೇ ಹೆಚ್ಚು ಕಾಳಜಿತೋರುತ್ತಾರೆ ಇಂತಹ ಜನಪ್ರತಿನಿಧಿಗಳಿಗೆ ಆಯಾ ತಾಲ್ಲೂಕಿನ ಮಕ್ಕಳು ನಮ್ಮ ಸಮಸ್ಯೆಗಳ ಬಗ್ಗೆ ವಿಧಾನಸಭೆ ಪರಿಷತ್ತುಗಳ ಕಲಾಪಗಳಲ್ಲಿ ಧ್ವನಿ ಎತ್ತಬೇಕೆಂದು ಒತ್ತಾಯಿಸಿ ಮನವಿ ನೀಡಬೇಕೆಂದು ತಿಳಿಸಿದರು. ಸಾಂಸ್ಕೃತಿಕ ಸಂಘಟಕ ಹಾಗೂ ಗಾಯಕ ಡಿ.ಓ. ಮುರಾರ್ಜಿ ಮಾತನಾಡಿದರು. ಪರಿವರ್ತನ ಸಂಸ್ಥೆ ಕಾರ್ಯದರ್ಶಿ ಕೆ. ಕಲ್ಲೇಶ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಕ್ಕಳಾದ ಮೇಘರಾಜ, ಇಂಚರ, ಸಹ ಶಿಕ್ಷಕ ಡಿ. ಕಲ್ಲೇಶ್, ಉಪಸ್ಥಿತರಿದ್ದರು. ಗಾಯಕ ಎಂ. ಕೆ. ಹರೀಶ್ ನಿರೂಪಿಸಿ, ಹೆಚ್. ಮಲ್ಲಿಕಾರ್ಜುನ್‌ಸ್ವಾಗತಿಸಿ,ಬಾಲಮಂದಿರದ ಸೌಜನ್ಯ ಪ್ರಾರ್ಥಿಸಿದರು.

### ದಾವಣಗೆರೆ ವಿಶ್ವವಿದ್ಯಾಲಯ ಮಟ್ಟದ ಪಂದ್ಯಾವಳಿ

# ಚಳ್ಳಕೆರೆ ಎಚ್‌ಪಿಪಿಸಿ ಕಾಲೇಜಿಗೆ ಹಾಕಿ ಪಂದ್ಯದಲ್ಲಿ ಪ್ರಥಮ ಸ್ಥಾನ: ಅಭಿನಂದನೆ



» ಚಳ್ಳಕೆರೆ

ದಾವಣಗೆರೆ ವಿಶ್ವವಿದ್ಯಾಲಯ ಅಂತರ್ ಕಾಲೇಜುಗಳ ಪುರುಷ ವಿಭಾಗದ ಹಾಕಿ ಪಂದ್ಯಾವಳಿ ಇತ್ತೀಚೆಗೆ ನಡೆದಿದ್ದು, ನಗರದ ಎಚ್‌ಪಿಪಿಸಿ ಪ್ರಥಮ ದರ್ಜೆ ಕಾಲೇಜು ಹಾಕಿ ಪಂದ್ಯದಲ್ಲಿ ಪ್ರಥಮ ಸ್ಥಾನಗಳಿಸಿದೆ ಎಂದು ಕಾಲೇಜು ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗದ ನಿರ್ದೇಶಕ ಎಚ್.ತಿಪ್ಪೇಸ್ವಾಮಿ ತಿಳಿಸಿದರು.

ಅವರು, ಈ ಬಗ್ಗೆ ಮಾಹಿತಿ ನೀಡಿ, ಉತ್ತಮ ಆಟವನ್ನು ಪ್ರದರ್ಶಿಸಿ ಪ್ರಥಮ ಶ್ರೇಣಿಯಲ್ಲಿ ಪಂದ್ಯದಲ್ಲಿ ಜಯಗಳಿಸಿ ವಿಶ್ವವಿದ್ಯಾಲಯ ಮಟ್ಟದಲ್ಲಿ ಚಳ್ಳಕೆರೆ ಕಾಲೇಜಿನ ಹೆಸರನ್ನು ಉಳಿಸುವಲ್ಲಿ ಆಟಗಾರರ ಶ್ರಮ ಅಪಾರವಾದದ್ದು. ಆಟಗಾರರಾದ ಪ್ರಜ್ವಲ್, ತಿಪ್ಪೇಶಿ, ಪುನೀತ್, ಗಣೇಶ್, ದರ್ಶನ್, ಯುವರಾಜ್, ಪವನ್, ಕುಮಾರ್, ದೇವರಾಜು, ರೋಹಿತ್‌ರವರನ್ನು ಅಭಿನಂದಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ.ಆರ್. ರಂಗಪ್ಪ, ವಿಶ್ವವಿದ್ಯಾಲಯ ಮಟ್ಟದ ಕ್ರೀಡೆಯಲ್ಲಿ ನಮ್ಮ ಕಾಲೇಜಿನ ಕ್ರೀಡಾಪಟುಗಳು ಸಾಕಷ್ಟು ಪರಿಶ್ರಮದಿಂದ ಪಂದ್ಯದಲ್ಲಿ ಗೆಲುವು ಸಾಧಿಸಿದ್ದಾರೆ.

ಯಾವುದೇ ರೀತಿಯ ಸಮಸ್ಯೆಗಳಿಲ್ಲದೆ ಸಂಘಟಿತ ಆಟದಿಂದ ಈ ಗೆಲುವು ಸಾಧಿಸಿದ್ದಾರೆ. ಕ್ರೀಡೆಯೂ ಸಹ ಮಹತ್ವದ ಕ್ಷೇತ್ರವಾಗಿದ್ದು, ಕ್ರೀಡಾಪಟುಗಳು ಯಾವುದೇ ಆಟವಾದರೂ ಸಮರ್ಥವಾಗಿ ಆಡಿ ಜಯಗಳಿಸುವತ್ತ ಉತ್ತಮ ಹೆಜ್ಜೆ ಇಡಬೇಕು ಎಂದರು.

ಸಹಾಯಕ ಪ್ರಾಧ್ಯಾಪಕರಾದ ರಘುನಾಥ, ದೈಹಿಕ ಶಿಕ್ಷಣ ವಿಭಾಗದ ಉಪನ್ಯಾಸಕರಾದ ಡಾ.ಗಂಗಾಧರ, ಅನಿಲ್ ಮುಂತಾದವರು ಉಪಸ್ಥಿತರಿದ್ದರು.

### ಪಂಪ್‌ಸೆಟ್‌ಗಳಿಗೆ 7 ಗಂಟೆ ವಿದ್ಯುತ್ ಸರಬರಾಜು



» ಮೊದಲ ಪುಟದಿಂದ

ಅದನ್ನು 40 ಯೂನಿಟ್‌ಗಳಿಗೆ ನಮ್ಮ ಸರ್ಕಾರವೇ ಹಿಂದೆ ಹೆಚ್ಚಳ ಮಾಡಿತ್ತು. ಈ ಗೃಹಜ್ಯೋತಿ ಬಂದ ನಂತರ ಭಾಗ್ಯಜ್ಯೋತಿ, ಕುಟೀರ ಜ್ಯೋತಿ, ಅಮೃತಜ್ಯೋತಿಗಳನ್ನು ಗೃಹಜ್ಯೋತಿ ಯೋಜನೆಯಡಿ ಸೇರಿಸಿ, 58 ಯೂನಿಟ್‌ವರಗೆ ಉಚಿತವಾಗಿ ವಿದ್ಯುತ್ ನೀಡಲು ತೀರ್ಮಾನಿಸಿದೆ. ಭಾಗ್ಯಜ್ಯೋತಿ, ಕುಟೀರ ಜ್ಯೋತಿ, ಅಮೃತಜ್ಯೋತಿ ಯೋಜನೆಗಳಡಿ 389.66 ಕೋಟಿ ರೂ.ಗಳು ಬಾಕಿ ಉಳಿದಿದ್ದವು.ಬಾಕಿ ಇರುವುದರಿಂದ ಗೃಹಜ್ಯೋತಿಯಡಿ ಉಚಿತ ಕೊಡುವುದು ಕಷ್ಟವಾಗುತ್ತಿತ್ತು. ಆದ್ದರಿಂದ ಬಾಕಿ ಮೊತ್ತವನ್ನು ಒಂದು ಬಾರಿಗೆ ಮನ್ನಾ ಮಾಡಲಾಗುತ್ತಿದೆ. ಇನ್ನು ಮುಂದೆ ಬಾಕಿ ಕೊಡಬೇಕಾದ ಅಗತ್ಯವಿಲ್ಲ. ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಜೂನಿಯರ್ ಕಾಲೇಜುಗಳಿಗೆ ನವೆಂಬರ್ 1 ರಂದು ಘೋಷಿಸಿದಂತೆ ವಿದ್ಯುತ್ ಹಾಗೂ ನೀರಿನ ವೆಚವನ್ನು ಸರ್ಕಾರವ ಭರಿಸಲಿದೆ ಎಂದು ಸಭೆಯಲ್ಲಿ ತೀರ್ಮಾನ ಮಾಡಲಾಗಿದೆ. ಮುಂದಿನ ಮುಂಗಾರಿನವರೆಗೆ ಮಳೆ ಬರುವುದಿಲ್ಲ ಎಂದು ಲೆಕ್ಕ ಹಾಕಿಯೇ ಈ ತೀರ್ಮಾನ ಮಾಡಲಾಗಿದೆ. ಜುಲೈ ಅಂತ್ಯದವರೆಗೆ ಲೆಕ್ಕ ಹಾಕಲಾಗಿದೆ ಎಂದರು.ಶೇ 70 ರಷ್ಟು ಥರ್ಮಲ್ ವಿದ್ಯುತ್ ಉತ್ಪಾದನೆ: ಸುದ್ದಿಗಾರರ ಪ್ರಶ್ನೆಯೊಂದಕ್ಕೆ ಉತ್ತರಿಸಿ ವಿದ್ಯುತ್ ಖರೀದಿಯ ಮೊತ್ತ ಎಷ್ಟು ವಿದ್ಯುತ್ ಖರೀದಿಸುತ್ತೇವೆ ಎನ್ನುವುದರ ಮೇಲೆ ಅವಲಂಬಿತವಾಗಿದೆ. ಶೇ 70 ರಷ್ಟು ಥರ್ಮಲ್ ವಿದ್ಯುತ್ ಉತ್ಪಾದನೆಯಾಗುತ್ತಿದೆ 1000 ಯೂನಿಟ್‌ವರೆಗೆ ವಿದ್ಯುತ್ ಹೊರಗಿನಿಂದ ಖರೀದಿಯಾಗುತ್ತಿದೆ ಎಂದರು. ಸ್ಥಳೀಯ ಹಾಗೂ ಆಮದು ಮಾಡಿದ ಕಲ್ಲಿದ್ದಲನ್ನು ಮಿಶ್ರ ಮಾಡಿ ಬಳಸುವುದರಿಂದ ವಿದ್ಯುತ್ ಉತ್ಪಾದನೆಯಾಗುತ್ತದೆ. ಉತ್ತರಪ್ರದೇಶ ಹಾಗೂ ಪಂಜಾಬ್ ನಡುವೆ ನಮ್ಮದು ವಿನಿಮಯ ಪದ್ಧತಿ ಇದೆ. ಈಗ ಪಡೆದು, ಜೂನ್‌ನಿಂದ ನಾವು ಅವರಿಗೆ ಹಿಂದಿರುಗಿಸುತ್ತೇವೆ. ಯಾವುದೇ ಖಾಸಗಿಯವರಿಂದ ವಿದ್ಯುತ್ ಖರೀದಿಸಿಲ್ಲ ಎಂದು ವಿವರಿಸಿದರು.ಗೃಹಲಕ್ಷ್ಮಿ ಯೋಜನೆಯ ಎರಡು ಸಾವಿರಗಳನ್ನು ಚಿಟ್ ಫಂಡ್ ಹೂಡಿಕೆ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ಎಂಬ ಪ್ರಶ್ನೆಗೆ ಉತ್ತರಿಸುತ್ತಾ, ಇಂತಹ ಯಾವುದೇ ಯೋಜನೆಗಳು ಸರ್ಕಾರದ ಮುಂದಿಲ್ಲ. ಮಹಿಳೆಯರಿಗೆ ಡಿಬಿಟಿ ಮೂಲಕ ಎರಡು ಸಾವಿರ ರೂ.ಗಳು ನೀಡಲಾಗುತ್ತಿದ್ದು, ಇದನ್ನು ಮುಂದುವರೆಸಲಾಗುವುದು ಎಂದರು.ಗಣಿ ಇಲಾಖೆಯ ಅಧಿಕಾರಿಗಳ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡುತ್ತಾ, ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಆರೋಪಿಯೊಬ್ಬರನ್ನು ವಶಕ್ಕೆ ಪಡೆಯಲಾಗಿದ್ದು, ಅವರು ಕೊಲೆಯಾದ ಅಧಿಕಾರಿಗಳ ವಾಹನಚಾಲಕರಾಗಿ ಕಾರ್ಯನಿರ್ವಹಿಸುತ್ತಿದ್ದ ಎನ್ನಲಾಗಿದೆ.

### ಚಾರುವಸಂತ ರಂಗರೂಪ



» ಚಿತ್ರದುರ್ಗ

ನಗರದ ತ.ರಾ.ಸು ರಂಗಮಂದಿರದಲ್ಲಿ ನ.8 ರಂದು ಸಂಜೆ 6 ಗಂಟೆಗೆ ದಕ್ಷಿಣ ಕನ್ನಡ ಜಿಲ್ಲೆ ಮೂಡುಬಿದಿರೆಯ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಆಳ್ವಾಸ್ ರಂಗ ಅಧ್ಯಯನ ಕೇಂದ್ರದ ಕಲಾವಿದರಿಂದ ನಾಡೋಜ ಹಂಪನಾ ವಿರಚಿತ ದೇಸೀಕಾವ್ಯದ ರಂಗರೂಪ ಚಾರುವಸಂತ ನಾಟಕವು ಡಾ.ಜೀವನ್‌ರಾಂ ಸುಳ್ಯ ನಿರ್ದೇಶನದಲ್ಲಿ ಪ್ರದರ್ಶನಗೊಳ್ಳಲಿದೆ. ಸಾರ್ವಜನಿಕರು, ರಂಗಾಸಕ್ತರು, ಸಾನಿತಿಗಳು, ಕಲಾವಿದರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಜಿಲ್ಲಾ ಕಸಾಪ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಕುಷ್ಟರೋಗ ಪುನರ್ ಮನನ ತರಬೇತಿ ಕಾರ್ಯಾಗಾರದಲ್ಲಿ ಡಿಹೆಚ್‌ಒ ಡಾ.ಜಿ.ಪಿ.ರೇಣುಪ್ರಸಾದ್

# ಕುಷ್ಠರೋಗ ಶೀಘ್ರಪತ್ತೆ ಹಚ್ಚಿ ಚಿಕಿತ್ಸೆ ನೀಡಿ, ಅಂಗವಿಕಲತೆ ತಪ್ಪಿಸಿ

» ಚಿತ್ರದುರ್ಗ

ಕುಷ್ಟರೋಗವನ್ನು ಶೀಘ್ರವಾಗಿ ಪತ್ತೆ ಹಚ್ಚಿ ಬಹುವಿಧ ಚಿಕಿತ್ಸೆಗೆ ತೊಡಗಿಸಿದಲ್ಲಿ ಉಂಟಾಗಬಹುದಾದ ಅಂಗವಿಕಲತೆ ತಪ್ಪಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ವಿ.ರೇಣುಪ್ರಸಾದ್ ಹೇಳಿದರು.

ಇಲ್ಲಿನ ಬುದ್ಧ ನಗರ ನಗರ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಸೋಮವಾರ ಕ್ಷೇತ್ರಮಟ್ಟದಲ್ಲಿ ಕಾರ್ಯನಿರ್ವಹಿಸುವ ಆಶಾ ಕಾರ್ಯಕರ್ತೆಯರಿಗೆ ಹಮ್ಮಿಕೊಂಡಿದ್ದ ಕುಷ್ಟರೋಗ ಪುನರ್ ಮನನ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಕುಷ್ಟರೋಗವನ್ನು ಶೀಘ್ರವಾಗಿ ಪತ್ತೆ ಹಚ್ಚಿ ಬಹುವಿಧ ಚಿಕಿತ್ಸೆಗೆ ತೊಡಗಿಸಿದಲ್ಲಿ ಉಂಟಾಗಬಹುದಾದ ಅಂಗವಿಕಲತೆ ತಪ್ಪಿಸಬಹುದಾಗಿದ್ದು, ಈ ನಿಟ್ಟಿನಲ್ಲಿ ಕ್ಷೇತ್ರ ಮಟ್ಟದ ಆಶಾ ಕಾರ್ಯಕರ್ತರಿಗೆ ಪುನರ್ ಮನನ ತರಬೇತಿ ಏರ್ಪಡಿಸಿದ್ದು, ಸರಿಯಾಗಿ ಸದುಪಯೋಗಪಡಿಸಿಕೊಳ್ಳಿ. ಬಹುವಿಧ ಔಷಧಿ ಚಿಕಿತ್ಸೆ ಉಚಿತವಾಗಿ ಪಡೆಯಿರಿ, ಕುಷ್ಟರೋಗ ತೊಲಗಿಸಿ ಎಂದು ಹೇಳಿದರು.

ಜಿಲ್ಲಾ ಕುಷ್ಟರೋಗ ನಿವಾರಣಾಧಿಕಾರಿ





ಡಾ.ಎನ್.ಜಿ.ನಾಗರಾಜ್ ಮಾತನಾಡಿ, ಕುಷ್ಟರೋಗವು ಯಾವುದೇ ಶಾಪವಲ್ಲ ವರವಲ್ಲ. ಲೆಪ್ರ ಬ್ಯಾಸಿಲೇ ಸೂಕ್ಷ್ಮಾಣು ಜೀವಿಯಿಂದ ಹರಡುವಂತಹ ಸಾಂಕ್ರಾಮಿಕ ರೋಗವಾಗಿದೆ. ನಿಯಮಿತವಾಗಿ ಬಹುವಿಧ ಔಷಧಿ ಚಿಕಿತ್ಸೆ ಪಡೆದುಕೊಂಡಲ್ಲಿ ಶೀಘ್ರ ಗುಣಮುಖರಾಗಬಹುದಾಗಿದೆ ಕುಷ್ಟರೋಗಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಕಳಂಕ ಸಮಾಜದಲ್ಲಿ ಕುಷ್ಠ ರೋಗಿಗಳನ್ನ ನೋಡುವ ರೀತಿ ನೀತಿಗಳು ಬದಲಾಗಬೇಕು ಎಂದರು.

ಇಂದು, ಕುಷ್ಠರೋಗದ ವಿರುದ್ಧದ ಕಳಂಕ ಮತ್ತು ಪೂರ್ವಾಗ್ರಹ ಗಣನೀಯವಾಗಿ ಕಡಿಮೆಯಾಗಿದೆ ಮತ್ತು ರೋಗದ ವಿನಾಶಗಳು ಸಮುದಾಯದಲ್ಲಿ ವಿರಳವಾಗಿ ಕಂಡುಬರುತ್ತವೆ.

ರೋಗವನ್ನು ಗುಣಪಡಿಸಲು ಪರಿಣಾಮಕಾರಿ ಔಷಧಿಗಳ ಲಭ್ಯತೆ, ಆರಂಭಿಕ ರೋಗನಿರ್ಣಯಕ್ಕೆ ತಂತ್ರಜ್ಞಾನದ ಪ್ರವೇಶ, ವಿರೂಪಗಳನ್ನು ತಡೆಗಟ್ಟುವುದು ಮತ್ತು ಸರಿಪಡಿಸುವುದು ಮತ್ತು ಕುಷ್ಠರೋಗದ ಬಗ್ಗೆ ಸಮಾಜದಲ್ಲಿ ಹೆಚ್ಚಿದ ಜಾಗೃತಿಯಿಂದಾಗಿ ಇದು ಸಾಧ್ಯವಾಗಿದೆ. ಸಾರ್ವಜನಿಕ ಆರೋಗ್ಯ ಮಟ್ಟದಲ್ಲಿ, ಇದು ಪ್ರಸರಣ ಮತ್ತು ರೋಗದ ಹರಡುವಿಕೆಯ ಪರಿಣಾಮಕಾರಿ ನಿಯಂತ್ರಣಕ್ಕೆ ಕಾರಣವಾಗಿದೆ. ನಾವು ಯಶಸ್ವಿಯಾಗಿ ನಿರ್ಮೂಲನೆಯನ್ನು ಸಾಧಿಸಿದ್ದೇವೆ ಮತ್ತು ಈಗ ಕುಷ್ಠರೋಗದ ನಿರ್ಮೂಲನೆಯತ್ತ ಸಾಗುತ್ತಿದ್ದೇವೆ ಎಂದು ತಿಳಿಸಿದರು.ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಕುಷ್ಟರೋಗ ಪತ್ತೆ ಹಚ್ಚುವ ಬಗ್ಗೆ ಕುಷ್ಟರೋಗಕ್ಕೆ ಇರುವ ಬಹುವಿಧ ಚಿಕಿತ್ಸೆ ಕುಷ್ಟರೋಗದ ಲಕ್ಷಣಗಳ ಬಗ್ಗೆ ತಿಳಿಸಿದರು.ತರಬೇತಿ ಕಾರ್ಯಾಗಾರದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೈ.ತಿಪ್ಪೇಶ್ ಮಾಹಿತಿ ನೀಡಿ ತರಬೇತಿ ನೀಡಿದರು. ಕಾರ್ಯಾಗಾರದಲ್ಲಿ ವೈದ್ಯಾಧಿಕಾರಿ ಡಾ.ಸುರೇಂದ್ರ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಪುನೀತ್, ಗುರುಮೂರ್ತಿ,ಜಿಲ್ಲಾ ಆಶಾ ಬೋಧಕರಾದ ಪೂರ್ಣಿಮಾ, ಚಿತ್ರದುರ್ಗ ತಾಲ್ಲೂಕಿನ ಎಲ್ಲಾ ಆಶಾ ಕಾರ್ಯಕರ್ತೆಯರು ಇದ್ದರು.

## ಫಾಸ್ಟ್ ನ್ಯೂಸ್

### ಅಪಘಾತ ಪರಿಹಾರ: ಅಸಂಘಟಿತ ಕಾರ್ಮಿಕರಿಂದ ಅರ್ಜಿ

» **ಚಿತ್ರದುರ್ಗ**

ಕೇಂದ್ರ ಸರ್ಕಾರವು ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ದತ್ತಾಂಶ ಕ್ರೋಢೀಕರಿಸುವ ಉದ್ದೇಶದಿಂದ 379 ವರ್ಗಗಳ ಎಲ್ಲಾ ಅಸಂಘಟಿತ ಕಾರ್ಮಿಕರನ್ನು ಇ-ಶ್ರಮ ಪೋರ್ಟಲ್ ಮೂಲಕ 2021ರ ಆಗಸ್ಟ್ 26 ರಿಂದ ನೋಂದಾಯಿಸಲಾಗುತ್ತಿದ್ದು, 2022ರ ಮಾರ್ಚ್ 31 ರವರೆಗೆ ನೋಂದಣಿಯಾಗಿ ಮತ್ತು ಈ ದಿನಾಂಕದೊಳಗೆ ಅಪಘಾತಗೊಂಡ ಫಲಾನುಭವಿಗಳಿಗೆ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ರೂ.2 ಲಕ್ಷಗಳ ಅಪಘಾತ ಪರಿಹಾರ ಒದಗಿಸಲಾಗುವುದು. ಈ ಸಂಬಂಧ ಅಸಂಘಟಿತ ಕಾರ್ಮಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅಪಘಾತದಿಂದ ಮರಣ ಹೊಂದಿದ್ದಲ್ಲಿ ಸಲ್ಲಿಸಬೇಕಾದ ದಾಖಲೆಗಳು: ಫಲಾನುಭವಿಯ ಆಧಾರ್ ಸಂಖ್ಯೆ, ಗಂಓ ಕಾರ್ಡ್ (ಇ-ಶ್ರಮ್ ಕಾರ್ಡ್) ಸಂಖ್ಯೆ, ಮರಣ ಪ್ರಮಾಣ ಪತ್ರ, ಮರಣಕ್ಕೆ ಕಾರಣದ ವೈದ್ಯಕೀಯ ಪ್ರಮಾಣ ಪತ್ರ, ಎಫ್ಐಆರ್/ಪಂಚನಾಮ, In case claimant is minor, Guardian should produce certificate of guardianship issued by District Court while filling the claim.

ಅಪಘಾತದಿಂದ ಅಂಗವೈಕಲ್ಯ ಹೊಂದಿದ್ದಲ್ಲಿ ಸಲ್ಲಿಸಬೇಕಾದ ದಾಖಲೆಗಳು: ಫಲಾನುಭವಿಯ ಆಧಾರ್ ಸಂಖ್ಯೆ, ಗಂಓ ಕಾರ್ಡ್ (ಇ-ಶ್ರಮ್ ಕಾರ್ಡ್) ಸಂಖ್ಯೆ, ಅಪಘಾತದಿಂದ ಉಂಟಾದ ಅಂಗವೈಕಲ್ಯವನ್ನು ಸೂಚಿಸುವ ಡಿಸ್ಚಾರ್ಜ್ ಸಾರಾಂಶವನ್ನು ಒಳಗೊಂಡಿರುವ ಆಸ್ಪತ್ರೆಯ ದಾಖಲೆ, Disability certificate issued by the authorised personnel of State/UT Govt. or Unique Disability Identity Card (permanent) issued by Department of Empowerment of Persons with Disabilities, M/O Social Justice & Empowerment, Govt. of India. ಈ ಮೇಲೆ ತಿಳಿಸಿದ ಸೂಕ್ತ ದಾಖಲೆಯೊಂದಿಗೆ ಕಾರ್ಮಿಕ ಅಧಿಕಾರಿಗಳ ಕಛೇರಿ, ಜೆ.ಸಿ.ಆರ್ ಬಡಾವಣೆ, ಎಸ್.ಬಿ.ಐ ಬ್ಯಾಂಕ್ ಹತ್ತಿರ, 1ನೇ ಮಹಡಿ, ಚಿತ್ರದುರ್ಗ ಜಿಲ್ಲೆ, ಇಲ್ಲಿ ಅರ್ಜಿ ಸಲ್ಲಿಸಿ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಪ್ರಕಣೆಯಲ್ಲಿ ತಿಳಿಸಿದ್ದಾರೆ.

### ನ.7ರಂದು ಆಯುಷ್ಮಾನ್ ಭವ ಆರೋಗ್ಯ ಮೇಳ

» **ಚಿತ್ರದುರ್ಗ**

ಆಯುಷ್ಮಾನ್ ಭವ ಕಾರ್ಯಕ್ರಮದ ಅಡಿಯಲ್ಲಿ ಜಿಲ್ಲೆಯ ಎಲ್ಲಾ 11 ಸಮುದಾಯ ಆರೋಗ್ಯ ಕೇಂದ್ರಗಳಾದ ಭರಮಸಾಗರ, ಸಿರಿಗೆರೆ, ಬಿ.ದುರ್ಗ, ಬೆಲಗೂರು, ಕಿಟ್ಟದಾಳ್ ಕಂಚಿಪುರ ಶ್ರೀರಾಂಪುರ, ಧರ್ಮಪುರ, ಮರಡಿಹಳ್ಳಿ, ನಾಯಕನಹಟ್ಟಿ, ಪರಶುರಾಂಪುರ ಮತ್ತು ರಾಂಪುರಗಳಲ್ಲಿ ಇದೇ ನವೆಂಬರ್ 7ರಂದು ಅಸಾಂಕ್ರಾಮಿಕ ರೋಗಗಳ ಬಗ್ಗೆ (ಹೃದ್ರೋಗ, ರಕ್ತದ ಒತ್ತಡ, ಸಕ್ಕರೆ ಕಾಯಿಲೆ, ಕ್ಯಾನ್ಸರ್) ಮತ್ತು ಆರೋಗ್ಯ ಸೇವೆಗಳ ಬಗ್ಗೆ ವಿಶೇಷ ಮೇಳಗಳು ನಡೆಯಲಿದೆ. ಹೆಚ್ಚುವರಿಯಾಗಿ ಸಮುದಾಯ ಆರೋಗ್ಯ ಕೇಂದ್ರ ಹೊಸದುರ್ಗ ತಾಲ್ಲೂಕಿನ ಕೆ.ಕೆ.ಪುರದಲ್ಲಿ ಮಾನಸಿಕ ಆರೋಗ್ಯಕ್ಕೆ ಸಂಬಂಧಪಟ್ಟ ಶಿಬಿರವು ಮತ್ತು ಸಮುದಾಯ ಕೇಂದ್ರ ಬೆಲಗೂರಿನಲ್ಲಿ ರಕ್ತದಾನ ಶಿಬಿರ ಮತ್ತು ಕಿವಿ ಮೂಗು ಗಂಟಲು ತಜ್ಞರಿಂದ ತಪಾಸಣೆ ನಡೆಯಲಿದೆ. ಸಾರ್ವಜನಿಕರು ವಿಶೇಷ ಆರೋಗ್ಯ ಮೇಳಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ತಿಳಿಸಿದ್ದಾರೆ.

### ನ.13 ರಂದು ಗ್ಲಾಸ್‌ಹೌಸ್‌ನಲ್ಲಿ ಫಲಪುಷ್ಪ ಪ್ರದರ್ಶನ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮ



» **ದಾವಣಗೆರೆ**

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ತೋಟಗಾರಿಕೆ ಇಲಾಖೆಯಿಂದ ನವೆಂಬರ್ 13 ರಿಂದ 16 ರ ವರೆಗೆ ಗ್ಲಾಸ್ ಹೌಸ್‌ನಲ್ಲಿ ಫಲಪುಷ್ಪ ಪ್ರದರ್ಶನ ಏರ್ಪಡಿಸಲಾಗುತ್ತಿದ್ದು ಇಲ್ಲಿ ನ.13 ರಂದು ಸಂಜೆ ಲೇಸರ್, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ. ತಿಳಿಸಿದ್ದಾರೆ.

ಫಲಪುಷ್ಪ ಪ್ರದರ್ಶನದ ಅಂಗವಾಗಿ ಸಂಜೆ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮಗಳ ವೀಕ್ಷಣೆಗಾಗಿ ಪ್ರವೇಶವು ಉಚಿತವಾಗಿರುತ್ತದೆ. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನೃತ್ಯ ರೂಪಕ, ಲೇಸರ್ ಶೋ, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಫಲಪುಷ್ಪ ಪ್ರದರ್ಶನದಲ್ಲಿ ಚಂದ್ರಯಾನ-3, ವಿವಿಧ ಕಲಾತ್ಮಕ ಪುಷ್ಪಗಳ ಪ್ರದರ್ಶನ ಸೇರಿದಂತೆ ಔಷಧಗಿಡಗಳ ಪ್ರದರ್ಶನ, ವಿವಿಧ ಖಾದ್ಯವುಳ್ಳ ಕ್ಯಾಂಟೀನ್‌ಗಳು, ಉತ್ತರ ಕರ್ನಾಟಕ, ಮಲೆನಾಡು, ಮೈಸೂರು ಸೇರಿದಂತೆ ವಿವಿಧ ಭಾಗಗಳ ತಿನಿಸುಗಳು ಇಲ್ಲಿರಲಿವೆ ಎಂದು ಅವರು ತಿಳಿಸಿದ್ದಾರೆ.

---

**ವಿಧಾನ ಪರಿಷತ್ ಸದಸ್ಯ ನವೀನ್ ಆಕ್ರೋಶ**

# ರಾಜ್ಯದ ಎಲ್ಲಾ ಸಮಸ್ಯೆಗೆ ಕೇಂದ್ರದ ಕಡೆ ಬೊಟ್ಟು ತೋರುವ ಸರ್ಕಾರ ಇಲ್ಲೇನು ಕತ್ತೆ ಕಾಯುತ್ತಿದೆಯಾ?

» **ಚಿತ್ರದುರ್ಗ**



ರಾಜ್ಯದಲ್ಲಿನ ಎಲ್ಲಾ ಸಮಸ್ಯೆಗಳಿಗೆ ಕೇಂದ್ರ ಸರ್ಕಾರದ ಕಡೆ ಬೊಟ್ಟು ತೋರಿಸುತ್ತಿರುವ ರಾಜ್ಯ ಕಾಂಗ್ರೇಸ್ ಸರ್ಕಾರ ಇಲ್ಲೇನು ಕತ್ತೆ ಕಾಯುತ್ತಿದೆಯಾ ? ಎಂದು ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಕಿಡಿಕಾರಿದ್ದಾರೆ.

ನಗರದ ಜಲ್ಲಾ ಬಿಜೆಪಿ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದೆಲ್ಲೇಡೆ ಭೀಕರ ಬರಗಾಲ ತಾಂಡವ ಆಡುತ್ತಿದೆ. ಇದರ ಬಗ್ಗೆ ಪ್ರವಾಸ ಮಾಡಿ ರೈತರ ಸಮಸ್ಯೆಗಳನ್ನು ಆಲಿಸಿ ಪರಿಹಾರ ನೀಡುವುದನ್ನು ಬಿಟ್ಟು ಪ್ರತಿಯೊಂದಕ್ಕೂ ಕೇಂದ್ರ ಸರ್ಕಾರ ನಮಗೆ ಸ್ಪಂದಿಸುತ್ತಿಲ್ಲ, ಹಣ ನೀಡುತ್ತಿಲ್ಲ ಎಂದು ಆರೋಪಿಸುವ ಕೆಲಸ ಮಾಡುವುದಾದರೆ, 6.5 ಕೋಟಿ ಜನರಿಂದ ಆಯ್ಕೆಯಾಗಿ ರಾಜ್ಯದಲ್ಲಿ ಸರ್ಕಾರ ನಡೆಸುತ್ತಿರುವ ಕಾಂಗ್ರೇಸ್ ನವರು ಏನು ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದರು.

ರಾಜ್ಯದ 31 ಜಿಲ್ಲೆಗಳಲ್ಲಿ ಭೀಕರ ಬರ ಪರಿಸ್ಥಿತಿ ಆವರಿಸಿದ್ದು, ಇದನ್ನು ಸಮರ್ಕಪಕವಾಗಿ ನಿಭಾಯಿಸುವಲ್ಲಿ ಸಂಪೂರ್ಣ ಹಳಿ ತಪ್ಪಿರುವ ಕಾಂಗ್ರೇಸ್ ಸರ್ಕಾರ, ರೈತರ ಸಮಸ್ಯೆಗಳನ್ನು ಆಲಿಸದೆ ಅಧಿಕಾರಕ್ಕಾಗಿ ದಿನನಿತ್ಯ ಬಡಿದಾಟ ಮಾಡುತ್ತಿದೆ. ಸಚಿವರು ಕೇವಲ ಅಧಿಕಾರ ಹಂಚಿಕೆಯ ಚಿಂತನೆಯಲ್ಲೇ ತೊಡಗಿದ್ದಾರೆ. ಇದರಿಂದ ಅವರನ್ನು ಬಡಿದೆಬ್ಬಿಸುವ ಕೆಲಸ ಮಾಡಲು ಭಾರತೀಯ ಜನತಾ ಪಕ್ಷ ಪ್ರತಿ 7 ತಂಡಗಳನ್ನು ಮಾಡಿಕೊಂಡು, ಪ್ರತಿ ತಾಲ್ಲೂಕಿಗೆ ಭೇಟಿ ನೀಡಿ ಅಲ್ಲಿನ ರೈತರು, ಕೂಲಿ ಕಾರ್ಮಿಕರ, ಜನ ಸಾಮಾನ್ಯರ ಕಷ್ಟಗಳನ್ನು ಆಲಿಸಿ ಅವುಗಳನ್ನು ಶೀಘ್ರವೇ ಈಡೇರಿಸುವಂತೆ ಸರ್ಕಾರದ ಮೇಲೆ ಒತ್ತಡ ತರುವ ಕೆಲವನ್ನು ಮಾಡಲಿದೆ ಎಂದು ತಿಳಿಸಿದರು.

ಬಿಜೆಪಿ ಮುಖಂಡರಾದ ವಿಶ್ವೇಶ್ವರ ಹೆಗಡೆ ಕಾಗೇರಿ ನೇತೃತ್ವದ ತಂಡ ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಯಲ್ಲಿ ಇಂದಿನಿಂದ ಪ್ರವಾಸ ಮಾಡಲಿದ್ದು, ತಂಡದಲ್ಲಿ ಶಾಸಕ ಎಂ.ಚಂದ್ರಪ್ಪ, ಕೆ.ಎಸ್.ನವೀನ್, ಮಾಜಿ ಶಾಸಕರಾದ ಜಿ.ಹೆಚ್.ತಿಪ್ಪಾರೆಡ್ಡಿ, ಬಿ.ಪಿ.ಹರೀಶ್, ರಾಮಚಂದ್ರ ಸೇರಿದಂತೆ ಇತರರು ಇದ್ದು, ಇಂದು ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕಿನಿಂದ ಪ್ರವಾಸ ಕೈಗೊಳ್ಳಲಿದ್ದೇವೆ. ಹೊನ್ನಾಳಿ, ಚನ್ನಗಿರಿ, ಮಾಯಕೊಂಡ ಪ್ರಾವಾಸ ನಡೆಸಿ ನಾಳೆ ಚಿತ್ರದುರ್ಗದಲ್ಲಿ ಪ್ರವಾಸ ಮಾಡುತ್ತೇವೆ. ಚಳ್ಳಕೆರೆಯಲ್ಲಿ ದೇವರ ಎತ್ತುಗಳಿಗೆ ಮೇವಿನ ಕೊರತೆ, ಅಲ್ಲಿನ ಸಣ್ಣ ಕೈಗಾರಿಕೆಗಳ ವಿದ್ಯುತ್ ಸಮಸ್ಯೆ ಕುರಿತು ಮಾಲಿಕರು, ರೈತರೊಂದಿಗೆ ಚರ್ಚೆ ನಡೆಸಲಾಗುವುದು ಎಂದರು.

ಹೊಸ ವಿದ್ಯುತ್ ಸಂಪರ್ಕಕ್ಕೆ ರೈತರು ತಾವೇ ಹಣ ಪಾವತಿಸಬೇಕು ಎಂಬ ಸರ್ಕಾರದ ಆದೇಶ ಗಾಯದ ಮೇಲೆ ಬರೆ ಎಳೆದಂತಾಗಿದೆ. ಈಗಾಗಲೇ ರೈತರು ಐಸಿಯು ನಲ್ಲಿ ಮಲಗಿದ್ದು, ಅವರಿಗೆ ನೀಡುತ್ತಿರುವ ಆಕ್ಸಿಜನ್ ಕಟ್ ಮಾಡುವ ಕೆಲಸವನ್ನು ಸರ್ಕಾರ ಮಾಡುತ್ತಿದೆ. ಇದೊಂದು ಮಾನಗೆಟ್ಟ ಸರ್ಕಾರ ನೀತಿಯಾಗಿದೆ ಎಂದು ದೂರಿದರು.

ಶಾಸಕ ಎಂ.ಚಂದ್ರಪ್ಪ ಮಾತನಾಡಿ, ಯಾಡಿಯೂರಪ್ಪನವರ ಬಿಜೆಪಿ ಸರ್ಕಾರದಲ್ಲಿ ರಾಜ್ಯದಲ್ಲಿ ಬರ ಘೋಷಣೆ ಆಗುತ್ತಿದ್ದಂತೆಯೇ ಮೊದಲ ಕಂತಿನ ಹಣವನ್ನು ಬಿಡುಗಡೆ ಮಾಡುತ್ತಿತ್ತು. ಆದರೆ ಸಿದ್ದರಾಮಯ್ಯ ಇದುವರೆಗೂ ಹಣ ಬಿಡುಗಡೆ ಮಾಡಿಲ್ಲ. ಎಲ್ಲವನ್ನು ಕೇಂದ್ರಕ್ಕೆ ಕೇಳಿ ಎಂದರೆ ರಾಜ್ಯದ ಜನ ಮತ ಹಾಕಿರುವುದು ಏಕೆ ? ಎಂದು ಕಿಡಿಕಾರಿದರು.

ಸಿದ್ದರಾಮಯ್ಯ ಸಂಪುಟದಲ್ಲಿ ಖಾತೆಗಳಿಗೆ ಸಂಬಂದ ಪಡದ ವ್ಯಕ್ತಿಗಳನ್ನು ಸಚಿವರನ್ನು ಮಾಡಿದ್ದಾರೆ. ಅವರಿಗೆ ರೈತರ ಬಗ್ಗೆ ಕಾಳಜಿ ಇಲ್ಲ. ಅವರ ಸಮಸ್ಯೆ ಏನು ಎಂಬುದೆ ಅರಿತಿಲ್ಲ. ಬೆಂಗಳೂರಲ್ಲಿ ಸಾವಿರಾರು ಕೋಟಿ ಹೊಂದಿರುವ ವ್ಯಕ್ತಿಯನ್ನು ಮಂತ್ರಿ ಮಾಡಿದ್ದಾರೆ ಅಂತಹ ಮಂತ್ರಿ ಆ ಸ್ಥಾನಕ್ಕೆ ಸೂಕ್ತ ಅಲ್ಲ ಎಂದು ಆರೋಪಿಸಿದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ, ರಾಜ್ಯ ಸರ್ಕಾರ ಪ್ರತಿಯೊಂದಕ್ಕೂ ಕೇಂದ್ರದ ಕಡೆ ಕೈ ತೋರಿಸುವುದು ಎಷ್ಟು ಸರಿ. ಕೇಂದ್ರದ ಹಣ ಬಂದಾಗ ನೀಡಲಿದೆ. ಅದಕ್ಕೂ ಮೊದಲು ತಮ್ಮ ಪಾಲಿನ ಹಣವನ್ನು ನೀಡಲಿ ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾದ್ಯಕ್ಷ ಮುರುಳಿ, ವೆಂಕಟೇಶ್ ಯಾದವ್, ನರೇಂದ್ರ, ದಗ್ಗೆ ಶಿವಪ್ರಕಾಶ್, ನಾಗರಾಜ್ ಬೇದ್ರೆ ಉಪಸ್ಥಿತರಿದ್ದರು.

---

# ರಂಗಕಲೆಗೆ ಜೀವ ತುಂಬಿದ ಹೆಗ್ಗಳಿಗೆ ರಾಜ್ಯೋತ್ಸವ ಪ್ರಶಸ್ತಿ ವಿಜೇಯ ಪಿ.ತಿಪ್ಪೇಸ್ವಾಮಿಯವರದ್ದು: ಶಾಸಕ

» **ಚಳ್ಳಕೆರೆ**



ಸುಮಾರು 50 ವರ್ಷಗಳಿಗೂ ಹೆಚ್ಚು ಕಾಲ ರಂಗಕಲೆಯನ್ನು ನಾಡಿನಾದ್ಯಂತ ಪ್ರಸಾರ ಮಾಡಿದ ಹಾಗೂ ನಾಟಕಗಳಿಗೆ ತಮ್ಮ ಸಂಗೀತದ ಮೂಲಕವೇ ಜೀವ ತುಂಬುತ್ತಿದ್ದ ಹಿರಿಯ ರಂಗಕಲಾವಿದ ಪಿ.ತಿಪ್ಪೇಸ್ವಾಮಿಯವರ ನಿರಂತರ ಸೇವೆಯನ್ನು ರಾಜ್ಯ ಸರ್ಕಾರ ಪರಿಗಣಿಸಿ ರಾಜ್ಯಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿ, ಸನ್ಮಾನಿಸಿರುವುದು ಹೆಮ್ಮೆಯ ವಿಷಯವೆಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ಡಿ.ವೀರಣ್ಣ ಲೇಔಟ್‌ನಲ್ಲಿರುವ ಪಿ.ತಿಪ್ಪೇಸ್ವಾಮಿ ನಿವಾಸಕ್ಕೆ ತೆರಳಿ ಕ್ಷೇತ್ರದ ಜನತೆ ಮತ್ತು ತಾಲ್ಲೂಕಿನ ರಂಗಕಲಾವಿದ ಪರವಾಗಿ ಅವರನ್ನು ಗೌರವಪೂರ್ವಕವಾಗಿ ಅಭಿನಂದಿಸಿ ಮಾತನಾಡಿದರು.

ನಾನು ಕಳೆದ ಸುಮಾರು 15 ವರ್ಷಗಳಿಂದ ಪಿ.ತಿಪ್ಪೇಸ್ವಾಮಿಯವರ ರಂಗಕಲೆಯ ಬಗ್ಗೆ ಅನೇಕ ಮಾಹಿತಿ ಪಡೆದಿದ್ದೇನೆ. ಗ್ರಾಮೀಣ ಭಾಗದಲ್ಲಿ ಹಳ್ಳಿ, ಹಳ್ಳಿಗೂ ಸಂಚರಿಸಿ ನಾಟಕಗಳನ್ನು ಕಟ್ಟಿ ಸಂಗೀತ ನಿರ್ದೇಶನ ಮಾಡಿ ತಮ್ಮ ಜೀವನದ ಬಹುಪಾಲು ಸಮಯವನ್ನು ರಂಗಕಲೆಯ ಅಭ್ಯುದಯಕ್ಕಾಗಿ ಅವರು ಮೀಸಲಿಟ್ಟಿದ್ದಾರೆ. ರಂಗಕಲೆಯ ಬಗ್ಗೆ ಅವರಲ್ಲಿ ಅಪಾರವಾದ ಶ್ರದ್ದೆ ಇದೆ. ನೂರಾರು ರಂಗಕಲಾವಿದರಿಗೆ ಮಾರ್ಗದರ್ಶನ ಮಾಡಿದ ಕೀರ್ತಿ ಅವರದ್ದು. ಯಾವುದೇ ಸಂದರ್ಭದಲ್ಲಿ ಯಾವುದೇ ಪ್ರಶಸ್ತಿ, ಸನ್ಮಾನಗಳಿಗೆ ಆಸೆಪಡದೆ ಪ್ರಾಮಾಣಿಕತೆಯಿಂದ ಅವರ ಸೇವೆಯನ್ನು ಮಾಡುತ್ತಾ ಬಂದಿದ್ದಾರೆ. ಸರ್ಕಾರ ಕೊನೆಗೂ ಅವರ ಶ್ರಮಕ್ಕೆ ರಾಜ್ಯಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡುವ ಮೂಲಕ ಗೌರವಿಸಿದೆ. ತಿಪ್ಪೇಸ್ವಾಮಿಯವರಿಗೆ ಈ ಪ್ರಶಸ್ತಿ ದೊರಕಿರುವುದು ಎಲ್ಲರೂ ಹೆಮ್ಮೆ ಪಡುವ ವಿಚಾರವಾಗಿದೆ ಎಂದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಸಿ.ಟಿ.ಶ್ರೀನಿವಾಸ್, ತಾಲ್ಲೂಕು ರೇವಣಸಿದ್ದೇಶ್ವರ ವಿದ್ಯಾವರ್ಧಕ ಸಂಘ ಅಧ್ಯಕ್ಷ ಆರ್.ಮಲ್ಲೇಶಪ್ಪ, ಮಾಜಿ ಪುರಸಭಾ ಸದಸ್ಯ ದಳವಾಯಿಮೂರ್ತಿ, ಕಾಂಗ್ರೆಸ್ ಮುಖಂಡರಾದ ಪ್ರಹ್ಲಾದ್, ದೊರೆಅಪ್ಪಣ್ಣ, ಭರಮಯ್ಯ, ಸೂರನಹಳ್ಳಿ ಜಗದೀಶ್, ದೊರೆನಾಗರಾಜು, ಅಪ್ಪಿ ಮುಂತಾದವರು ಉಪಸ್ಥಿತರಿದ್ದರು.

---

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ

» **ದಾವಣಗೆರೆ**

ಭಾರತ ಚುನಾವಣಾ ಆಯೋಗದನಿರ್ದೇಶನದನ್ವಯ ಭಾವಚಿತ್ರವಿರುವ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ನಡೆಯುತ್ತಿದ್ದು ಮತದಾರರ ಪಟ್ಟಿಗೆ ಯುವ ಮತದಾರರನ್ನು ಹೆಚ್ಚು ನೊಂದಾಯಿಸಲು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಮತದಾರರ ಪಟ್ಟಿ ವೀಕ್ಷಕರಾದ ಗುಂಜನ್ ಕೃಷ್ಣ ತಿಳಿಸಿದರು.

ಅವರು ಸೋಮವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ತಿಳಿಸಿದರು. ಕರಡು ಮತದಾರರ ಪಟ್ಟಿಯನ್ನು ಅಕ್ಟೋಬರ್ 27 ರಂದು ಪ್ರಕಟಿಸಲಾಗಿದ್ದು ಆಕ್ಷೇಪಣೆ ಸಲ್ಲಿಸಲು ಡಿಸೆಂಬರ್ 9 ರ ವರೆಗೆ ಅವಕಾಶ ಕಲ್ಪಿಸಲಾಗಿದೆ. ಮತ್ತು ಅಂತಿಮ ಮತದಾರರ ಪಟ್ಟಿಯನ್ನು 2024 ರ ಜನವರಿ 5 ರಂದು ಪ್ರಕಟಿಸಲಾಗುತ್ತದೆ.

ಜಿಲ್ಲೆಯ 7 ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2024 ಕ್ಕೆ ಜಿಲ್ಲೆಯಲ್ಲಿ 947205 ಗಂಡು, 951359 ಹೆಣ್ಣು ಸೇರಿ 1898000 ಜನಸಂಖ್ಯೆಯಾಗಲಿದೆ ಎಂದು ಅಂದಾಜಿಸಲಾಗಿದೆ. ಜನಸಂಖ್ಯೆಗನುಗುಣವಾಗಿ ಶೇ 76.60 ರಷ್ಟು ಮತದಾರರಿದ್ದಾರೆ. ಕರಡು ಮತದಾರರ ಪಟ್ಟಿಯನ್ವಯ 726931 ಪುರುಷ, 726887 ಮಹಿಳೆ ಸೇರಿ 1453818 ಮತದಾರರಿದ್ದಾರೆ.

ಯುವ ಮತದಾರರು; ಕರಡು ಪಟ್ಟಿಯನ್ವಯ ಯುವ ಮತದಾರರ ವಿವರದನ್ವಯ 18-19 ವರ್ಷದ 10493 ಪುರುಷ, 8815 ಮಹಿಳೆ, ಇತರೆ 2 ಸೇರಿ 19310 ಯುವ ಮತದಾರರಿದ್ದಾರೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ವಿವರ ನೀಡಿದರು. ಈ ವೇಳೆ ಮತದಾರರಲ್ಲಿ ಜಾಗೃತಿ ಮೂಡಿಸುವ ಮೂಲಕ ಯುವ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಮತದಾರರ ಪಟ್ಟಿಯಲ್ಲಿ ನೊಂದಾಯಿಸಲು ವೀಕ್ಷಕರಾದ ಗುಂಜನ್ ಕೃಷ್ಣ ಅವರು ತಿಳಿಸಿದರು. ಮತಗಟ್ಟೆ ಮಟ್ಟದ ಏಜೆಂಟ್ ನೇಮಿಸಿ; ಎಲ್ಲಾ ಪಕ್ಷದವರು ಮತಗಟ್ಟೆ ಮಟ್ಟದ ಏಜೆಂಟ್‌ಗಳನ್ನು ನೇಮಕ ಮಾಡಿ ಪಟ್ಟಿ ನೀಡಬೇಕು ಎಂದು ಸಭೆಯಲ್ಲಿ ಭಾಗವಹಿಸಿದ ಎಲ್ಲಾ ಪಕ್ಷಗಳ ಮುಖಂಡರಿಗೆ ತಿಳಿಸಿದರು. ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಇಟ್ನಾಳ್ ಉಪಸ್ಥಿತರಿದ್ದರು.

---

### 8 ವರ್ಷದ ಒಳಗಿನ ಮಕ್ಕಳಿಂದ ಬಾಲಗೌರವ ಪ್ರಶಸ್ತಿಗೆ ಅರ್ಜಿ

» **ದಾವಣಗೆರೆ**

ಕರ್ನಾಟಕ ಬಾಲವಿಕಾಸ ಅಕಾಡೆಮಿಯಿಂದ ಪ್ರಸಕ್ತ ಸಾಲಿನಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ವಿಶೇಷ ಸಾಧನೆಗೈದ 18 ವರ್ಷದ ಒಳಗಿನ ಮಕ್ಕಳಿಂದ ಬಾಲಗೌರವ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಮಕ್ಕಳು ಕ್ರೀಡೆ, ಸಂಗೀತ, ನೃತ್ಯ, ಬಹುಮುಖ ಪ್ರತಿಭೆ, ಚಿತ್ರಕಲೆ ಹಾಗೂ ವಿಜ್ಞಾನ ಮತ್ತು ಸಂಶೋಧನಾ ಕ್ಷೇತ್ರಗಳಲ್ಲಿ ಅಸಾಧಾರಣಾ ಸಾಧನೆಯನ್ನು ಮಾಡಿ ಪ್ರಶಸ್ತಿ ಪಡೆದ ಪುರಸ್ಕೃತ ಮಗುವಾಗಿರಬೇಕು. ಇಂತಹ ಮಕ್ಕಳು ಅಕಾಡೆಮಿ ಬಾಲಗೌರವ ಪ್ರಶಸ್ತಿಗಾಗಿ ತಮ್ಮ ಸ್ವಯಂ ದೃಢೀಕೃತ ನಕಲು ದಾಖಲೆಗಳೊಂದಿಗೆ ಹಾಗೂ ಸ್ವವಿವರಗಳನ್ನೊಳಗೊಂಡ ಮನವಿಯೊಂದಿಗೆ ಅರ್ಜಿಯನ್ನು ನ.18 ರೊಳಗಾಗಿ ಯೋಜನಾಧಿಕಾರಿಗಳು, ಚಂದ್ರಿಕಾ ಲೇ ಔಟ್ ಹಿಂಭಾಗ ಕೆ.ಎಚ್.ಬಿ ಕಾಲೋನಿ, ಲಕಮನಹಳ್ಳಿ ಧಾರವಾಡ 580004, ದೂ.ಸಂ: 0836-2461666 ವಿಳಾಸಕ್ಕೆ ಪೋಸ್ಟ್ ಮುಖಾಂತರ ತಲುಪುವಂತೆ ಕಳುಹಿಸುವುದು. ಈ ಪ್ರಶಸ್ತಿಯ ಅರ್ಜಿ ನಮೂನೆ, ಮಾನದಂಡಗಳನ್ನು ವೆಬ್‌ಸೈಟ್ ಲಿಂಕ್ https://balavikasaacademy.karnataka.gov.in/ ನಲ್ಲಿ ವೀಕ್ಷಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉಪ ನಿರ್ದೇಶಕಿ ವಸಂತಿ ಉಪ್ಪಾರ್ ತಿಳಿಸಿದ್ದಾರೆ.

---

## ಪ್ರಮುಖ ಸುದ್ದಿ

**ಎಬಿವಿಪಿಯ ರಾಜ್ಯ ಕಾರ್ಯದರ್ಶಿ ಪ್ರೇಮ ಶ್ರೀ ಜೋಡಿದಾರ್ ಹೇಳಿಕೆ**

# ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಎಬಿವಿಪಿ ಹೋರಾಟ

» **ಚಿತ್ರದುರ್ಗ**




ಚಿತ್ರದುರ್ಗದಲ್ಲಿ ಕಳೆದ ಎರಡು ದಿನಗಳಿಂದ ನಡೆದ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ನ ಕರ್ನಾಟಕ ದಕ್ಷಿಣ ಪ್ರಾಂತದ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ಮೂರು ನಿರ್ಣಯಗಳನ್ನು ತೆಗೆದುಕೊಂಡಿದ್ದು, ಅದರ ಜಾರಿಗೆ ಹೋರಾಟವನ್ನು ಮಾಡಲಾಗುವುದು ಎಂದು ಕರ್ನಾಟಕ ದಕ್ಷಿಣ ಎಬಿವಿಪಿಯ ರಾಜ್ಯ ಕಾರ್ಯದರ್ಶಿ ಕುಮಾರಿ ಪ್ರೇಮ ಶ್ರೀ ಜೋಡಿದಾರ್ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ಪರಿಷತ್‌ನ ಸಂಘಟನಾತ್ಮಕ ವಿಚಾತರವಾಗಿ 2023-24ನೇ ಸಾಲಿನ ಶಾಖೆಗಳು ಸದಸ್ಯತ್ವ, ಕಾಲೇಜು ಘಟಕ, ಹಾಸ್ಟೆಲ್ ಘಟಕ, ಸ್ಥಾನ ವಿಸ್ತಾರ ಕೇಂದ್ರ ಕುರಿತಂತೆ ಗರಿವಿಧಿ ಮತ್ತು ಆಯಾಮ ಕಾರ್ಯಗಳ ಕುರಿತು ಚರ್ಚೆಯನ್ನು ನಡೆಸಲಾಯಿತು.

ರಾಜ್ಯದ ಶೈಕ್ಷಣಿಕ ಪರಿಸ್ಥಿತಿ, ರಾಜ್ಯದ ವರ್ತಮಾನ ಪರಿಸ್ಥಿತಿ ಮತ್ತು ರಾಷ್ಟ್ರೀಯ ಶಿಕ್ಷಣ ನೀತಿ-2020 ರದ್ದತಿಗೆ ಖಂಡನೆ ಕುರಿತಂತೆ ಅಂಗೀಕರಿಸಲಾಯಿತು. ರಾಜ್ಯ ಸರ್ಕಾರ ಇತ್ತೀಚೇಗೆ ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ಸ್ಕಾಲರ್ ಶಿಪ್‌ನ್ನು ನಿಲ್ಲಿಸಿದೆ. ಇದರ ಬಗ್ಗೆ ಹೋರಾಟವನ್ನು ಎಬಿವಿಪಿ ಕೈಗೆತ್ತಿಕೊಳ್ಳಲಿದೆ.ಈವಿದ್ಯಾರ್ಥಿವೃತನವನ್ನು ನಂಬಿಕೊಂಡು ಲಕ್ಷಾಂತರ ವಿದ್ಯಾರ್ಥಿಗಳು ಶಿಕ್ಷಣವನ್ನು ಪಡೆಯುತ್ತಿದ್ದಾರೆ, ಇದಕ್ಕೆಲ್ಲಾ ರಾಜದ್ಯ ಸರ್ಕಾರ ಬರೆ ಎಳೆಯುತ್ತಿದೆ. ಇದರೊಂದಿಗೆ ಕೇಂದ್ರ ಸರ್ಕಾರ ಶಿಕ್ಷಣ ನೀತಿಯನ್ನು ಜಾರಿ ಮಾಡಿದೆ ಇದನ್ನು ರಾಜ್ಯ ಸರ್ಕಾರ ಜಾರಿ ಮಾಡಿತ್ತು ಆದರೆ ಈಗ ಬಂದಿರುವ ಸರ್ಕಾರ ಅದನ್ನು ರದ್ದು ಮಾಡಿ ತನ್ನದೇ ಆದ ಶಿಕ್ಷಣ ನೀತಿಯನ್ನು ಜಾರಿ ಮಾಡಲು ಹೊರಟಿದೆ, ಇದನ್ನು ಎಬಿವಿಪಿ ಖಂಡಿಸುತ್ತದೆ ಎಂದರು.

ರಾಜ್ಯ ಸರ್ಕಾರ ಎನ್.ಇ.ಪಿಯನ್ನು ರದ್ದು ಮಾಡಲು ಮುಂದಾಗಿದೆ ಇದನ್ನು ಖಂಡಿಸುತ್ತದೆ ರಾಜ್ಯದಲ್ಲಿ ಒಂದೊಂದು ಸರ್ಕಾರ ಆಡಳಿತವನ್ನು ನಡೆಸುವಾಗಲೂ ಒಂದೊಂದು ರೀತಿಯ ಶಿಕ್ಷಣ ಪದ್ದತಿಯನ್ನು ಜಾರಿ ಮಾಡುತ್ತದೆ ಇದರಿಂದ ವಿದ್ಯಾರ್ಥಿಗಳು ಬಲಿಯಾಗುತ್ತಿದ್ದಾರೆ.

ಯಾವ ಶಿಕ್ಷಣವನ್ನು ಪಡೆಯಬೇಕೆಂದು ಗೊಂದಲಿದ್ದಾರೆ ಎಂದ ಅವರು, ರಾಜ್ಯ ಸರ್ಕಾರ ತನ್ನ ಶಿಕ್ಷಣ ನೀತಿಯನ್ನು ಬರೀ ಕೇವಲ 5 ತಿಂಗಳಲ್ಲಿಯೇ ತಯಾರು ಮಾಡಿ ವಿದ್ಯಾರ್ಥಿಗಳಿಗೆ ನೀಡುವ ದಿಸೆಯಲ್ಲಿದೆ.

ಇದೇ ರೀತಿ ಹಾಸ್ಟಲ್‌ಗಳ ಪರಿಸ್ಥಿತಿಯು ಸಹ ಸರಿಯಿಲ್ಲ. ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹಾಸ್ಟಲ್ ಇಲ್ಲ ಇದರ ನಿರ್ಮಾಣಕ್ಕೂ ಸಹಾ ಸರ್ಕಾರ ಮುಂದಾಗಿಲ್ಲ, ಶೌಚಾಲಯಗಳು ಇಲ್ಲವಾಗಿದೆ. ಇದರ ಬಗ್ಗೆ ಸರ್ವೆಯನ್ನು ಮಾಡುವುದರ ಮೂಲಕ ಸರ್ಕಾರಕ್ಕೆ ವರದಿಯನ್ನು ನೀಡಲಾಗುವುದು ಎಂದು ಪ್ರೇಮ ತಿಳಿಸಿದರು.

2023-24ನೇ ಸಾಲಿನಲ್ಲಿ ಕನಾಟಕ ದಕ್ಷಿಣ ಪ್ರಾಂತದ 1,83,690 ಸದಸ್ಯತ್ವವು, 145 ಶಾಖೆಗಳು, 615 ಕಾಲೇಜು ಘಟಕಗಳು, 118 ಸಂಪರ್ಕ ಸ್ಥಾನ 140 ವಿಸ್ತಾರ ಕೇಂದ್ರಗಳನ್ನು ಹೊಂದಿದೆ. ಕಾನೂನು ವಿದ್ಯಾರ್ಥಿಗಳ ರಾಜ್ಯ ಸಮಾವೇಶವನ್ನು ಬಾಗಲಕೋಟೆಯಲ್ಲಿ ನಡೆಸಲಾಗುವುದು ಇದೇ ನ. 9 ರಂದು ಶಿವಮೊಗ್ಗದಲ್ಲಿ ನ. 10 ರಂದು ಬೆಂಗಳೂರಿನಲ್ಲಿ ಕಾಲೇಜು ಘಟಕಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ನವದೆಹಲಿಯಲ್ಲಿ ಡಿ.7 ರಿಂದ 10ರವರೆಗೆ ರಾಷ್ಟ್ರೀಯ ಸಮಾವೇಶ ನಡೆಯಲಿದೆ ಎಂದು ಹೇಳಿದರು.

ಗೋಷ್ಟಿಯಲ್ಲಿ ಜಿಲ್ಲಾ ಸಂಚಾಲಕ ಸಿದ್ದೇಶ್, ನಗರ ಕಾರ್ಯದರ್ಶಿ ಗೋಪಿ ವರುಣ ಉಪಸ್ಥಿತರಿದ್ದರು.

# ಜಾತಿ ನಿಗಮ ಬೇಡ; ಬೆಳೆ ಅಭಿವೃದ್ಧಿ ನಿಗಮಗಳಾಗಲಿ

» **ಹೊಸದುರ್ಗ**

ರಾಜ್ಯ ಸರ್ಕಾರವು ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಸ್ಥಾಪಿಸಿದೆ. ಈ ನಿಗಮದಲ್ಲಿ ದಲಿತರಿಗೆ ಮಾತ್ರ ಸೌಲಭ್ಯಗಳು ಸಿಗುತ್ತವೆ. ಹೀಗೆಯೇ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ವಾಲ್ಮೀಕಿ ಜನಾಂಗಕ್ಕೆ ಮಾತ್ರ ಲಾಭವಾಗುತ್ತಿದೆ. ಆದರೆ ಅಂಬೇಡ್ಕರ್ ರಚಿಸಿದ ಸಂವಿಧಾನ ಎಲ್ಲರಿಗೂ ಅನ್ವಯವಾಗುತ್ತದೆ. ಇದಕ್ಕಾಗಿ ಜಾತಿವಾರು ಅಭಿವೃದ್ಧಿ ನಿಗಮಗಳಿಗಿಂತ ಬೆಳೆ ಅಭಿವೃದ್ಧಿ ನಿಗಮಗಳನ್ನು ಸ್ಥಾಪಿಸಬೇಕು ಎಂದು ರೈತ ಮುಖಂಡ ತೇಜಸ್ವಿ ಪಟೇಲ್ ಆಗ್ರಹಿಸಿದರು.



ತಾಲೂಕಿನ ಸಾಣೇಹಳ್ಳಿಯ ಶ್ರೀ ಶಿವಕುಮಾರ ಬಯಲು ರಂಗ ಮಂದಿರದಲ್ಲಿ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಯವರ ನೇತೃತ್ವದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ನಾಟಕೋತ್ಸವದ ಸೋಮವಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ಕೃಷಿಕರ ನೋವು–ನಲಿವು ಹಾಗೂ ರಕ್ಷಣೆ ಕುರಿತಂತೆ ಮಾತನಾಡಿದರು.

ಸಮಾಜವನ್ನು ಜಾತಿ, ಧರ್ಮದಿಂದ ಕಟ್ಟುವುದಲ್ಲ. ನೈತಿಕ, ಪ್ರಾಮಾಣಿಕತೆಯಿಂದ ಕಟ್ಟಬೇಕಿದೆ. ಗ್ರಾಮೀಣ ಪ್ರದೇಶದಲ್ಲಿ ಸಂಬಂಧಗಳು ಸರಿಯಿರುತ್ತವೆ. ಆದರೆ ಚುನಾವಣೆಗಳು ಬಂದಾಗಲೆಲ್ಲ ಕೆಡುತ್ತವೆ. ಅದರಲ್ಲೂ ಗ್ರಾಮ ಪಂಚಾಯಿತಿ ಚುನಾವಣೆಗಳು ನಮ್ಮ ಗ್ರಾಮೀಣ ಪರಿಸ್ಥಿತಿಯನ್ನು ಕೆಡಿಸಿವೆ. ಇದಕ್ಕಾಗಿ ಹೊಗೆಮುಕ್ತ ನಗರ, ಹಗೆಮುಕ್ತ ಗ್ರಾಮ ಬರಲಿ ಎಂದು ಆಶಿಸಿದರು.

ಕೃಷಿಕರದು ಮೊದಲು ನೋವು, ಸಾಧ್ಯವಾದಷ್ಟು ನಲಿವು. ಸರ್ಕಾರದ ಅವಲಂಬನದ ಮೇಲೆ ರಕ್ಷಣೆ ನಿಂತಿದೆ. ಮೊದಲು ಆಹಾರವಾಗಿದ್ದ ಕೃಷಿ ಬಳಿಕ ಆದಾಯ ತರುವಂಥದ್ದಾಯಿತು. ಇದರಿಂದ ಬಹಳ ಬದಲವಣೆಗಳಾದವು. ಮೊದಲು ಅವಿಭಕ್ತ ಕುಟುಂಬಗಳಿದ್ದವು. ಏನೇ ಸಂಪತ್ತಿದ್ದರೂ ಹಂಚಿಕೊಳ್ಳುತ್ತಿದ್ದವು. ಆದರೆ ಅವಿಭಕ್ತ ಕುಟುಂಬಗಳು ವಿಭಕ್ತ ಕುಟುಂಬಗಳಾದ ಮೇಲೆ ಬೇಡಿಕೆಗಳು ಹೆಚ್ಚಿದವು. ವಿಜ್ಞಾನ, ತಂತ್ರಜ್ಞಾನ ಹೆಚ್ಚಾದ ಹಾಗೆ ಗ್ರಾಮೀಣ ಜೀವನ ಬದಲಾಯಿತು ಎಂದು ಹೇಳಿದರು.

ಆಹಾರ ತಜ್ಞ ಡಾ.ಸ್ವಾಮಿನಾಥನ್ ಅವರು ಜಮೀನಿನ ಕುರಿತು ನೀಡಿದ ಶಿಫಾರಸುಗಳನ್ನು ಸರ್ಕಾರಗಳು ಜಾರಿಗೆ ತಂದವು. ಆದರೆ ಕೃಷಿಕರ ಕುರಿತು ಅವರು ನೀಡಿದ ಶಿಫಾರಸುಗಳನ್ನು ಜಾರಿಗೆ ತರಲಿಲ್ಲ. ಆದರೂ ನಿಮ್ಮ ಹೊಟ್ಟೆ ತುಂಬಿಸಿದ್ದು, ಬಟ್ಟೆ ಕೊಟ್ಟಿದ್ದು ಕೃಷಿ. ಕೃಷಿಕರನ್ನು ಉಳಿಸಲು ಕನಿಷ್ಠ ಬೆಂಬಲ ಬೆಲೆ ಕೊಡಬೇಕೆಂದು ಸ್ವಾಮಿನಾಥನ್ ಶಿಫಾರಸು ಮಾಡಿದ್ದರು. ಬರಗಾಲ ಬಂದರೂ ಯಾರೂ ಹಸಿವಿನಿಂದ ಮೃತಪಟ್ಟಿಲ್ಲ. ಇದು ಕೃಷಿಯಿಂದ ಸಾಧ್ಯವಾಗಿದೆ ಎಂದು ತಿಳಿಸಿದರು.

ಕೃತಿ ಉತ್ಪನ್ನಗಳ ದರ ಹೆಚ್ಚಾದರೆ ಹಣದುಬ್ಬರ ಹೆಚ್ಚಾಗುತ್ತದೆ ಎಂದು ಆರ್ಥಿಕ ತಜ್ಞರು ಹೇಳುತ್ತಾರೆ. ಪೆಟ್ರೋಲ್, ಡೀಸೆಲ್ ಬೆಲೆ ದುಬಾರಿಯಾದರೆ ಹಣದುಬ್ಬರ ಆಗುವುದಿಲ್ಲವೆ ಎಂದು ಪ್ರಶ್ನಿಸಿದ ಅವರು, ಕಬ್ಬು ಬೆಳೆದರೆ ಜಿಡಿಪಿಗೆ ಬರುವುದಿಲ್ಲ. ಆದರೆ ಸಕ್ಕರೆ ಉತ್ಪಾದನೆಯಾದರೆ ಜಿಡಿಪಿ ಬರುತ್ತದೆ. ಹೀಗೆಯೇ ಭತ್ತ ಬೆಳೆದರೆ ಜಿಡಿಪಿಗೆ ಸಂಬಂಧಿಸಿಲ್ಲ. ಆದರೆ ಅಕ್ಕಿ ಉತ್ಪಾದನೆಯಾದರೆಜಿಡಿಪಿಗೆಒಳಪಡುತ್ತದೆ. ಹೀಗೆ ಪ್ರತಿಯೊಂದನ್ನೂ ಆರ್ಥಿಕ ಪ್ರಗತಿ ಹಿನ್ನೆಲೆಯಲ್ಲಿ ನೋಡಲಾಗುತ್ತಿದೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ಕೃಷಿ ಉತ್ಪನ್ನಗಳು ಪ್ರತಿಯೊಬ್ಬರಿಗೆ ಕೈಗೆ ಎಟುಕುವ ದರದಲ್ಲಿ ಸಿಗಬೇಕು ಉಳಿದ ಅಂದರೆ ಆರೋಗ್ಯ, ಶಿಕ್ಷಣಕ್ಕೆ ಸಂಬಂಧಿಸಿ ಕೈಗೆಟುಕುವ ದರಗಳಲ್ಲಿ ಇರಬೇಕು. ಎಂದು ಪ್ರತಿಪಾದಿಸಿದ ಅವರು, ಸಾವಯವ ಕೃಷಿಯಲ್ಲಿ ತೊಡಗಿಕೊಂಡವರಿಗೆ ಐದಾರು ಬೆಳೆಗಳವರೆಗೆ ಸರ್ಕಾರ ನೆರವಾಗಬೇಕು ಎಂದು ಕೋರಿದರು.

ಕೃಷಿಕರು ಸಾಲ ಮಾಡುವ ಪರಿಸ್ಥಿತಿ ಬಂದಿರುವುದು ಸರ್ಕಾರದ ನೀತಿಗಳಿಂದ. ರಸ್ತೆಬದಿಗಳಲ್ಲಿ ತರಕಾರಿಗಳು ಕಡಿಮೆ ದರವಿದ್ದರೂ ಕೊಳ್ಳುವುದಿಲ್ಲ. ಆದರೆ ಮಾಲ್, ಮಾರ್ಟ್‌ಗಳಲ್ಲಿ ದರ ಹೆಚ್ಚಿದ್ದರೂ ತರಕಾರಿಗಳನ್ನುಕೊಳ್ಳುತ್ತಾರೆ ಎಂದು ಬೇಸರ ವ್ಯಕ್ತಪಡಿಸಿದ ಅವರು, ಸರ್ಕಾರವು ಐದು ಗ್ಯಾರಂಟಿಯೋಜನೆಗಳನ್ನುಜಾರಿಗೆತಂದಿದೆ ನಿಜ. ಆದರೆ ಅರ್ಹ ಫಲಾನುಭವಿಗಳಿಗಿಂತ ಅನುಕೂಲವಿದ್ದವರೂ ಲಾಭ ಪಡೆಯುತ್ತಿದ್ದಾರೆ.

ಅತಿಥಿಯಾದ ಶಿಕಾರಿಪುರ ಶಾಸಕ ಬಿ.ವೈ.ವಿಜಿಯೇಂದ್ರ ಮಾತನಾಡಿ, ಕೋಪ ಇದ್ದಲ್ಲಿ ಪ್ರಾಮಾಣಿಕತೆ, ಪ್ರೀತಿ ಇರುತ್ತದೆ. ಪಂಡಿತಾರಾಧ್ಯ ಶ್ರೀಗಳದು ಸಾತ್ವಿಕ ಸಿಟ್ಟು. ಮಾಜಿ ಮುಖ್ಯ ಮಂತ್ರಿ ಬಿ.ಎಸ್. ಯಡಿಯೂರಪ್ಪ ಅಂದರೆ ಕೋಪ, ಕೋಪ ಅಂದರೆ ಯಡಿಯೂರಪ್ಪ ಎನ್ನುವ ಮಾತು ಜನಪ್ರಿಯವಾಗುತ್ತಿದೆ. ಬಡವರಿಗೆ ಅನ್ಯಾಯವಾಗಿದೆ ಎಂದ ಕೂಡಲೆ ಮೊದಲ ಧ್ವನಿ ಎತ್ತುತ್ತಿದ್ದವರು ಯಡಿಯೂರಪ್ಪನವರು. ಈ ನಾಡಿನ ಜನರ ಹೃಯದಲ್ಲಿ ಶಾಶ್ವತವಾಗಿ ಸ್ಥಾನ ಗಳಿಸಿಕೊಂಡವರು ಯಡಿಯೂರಪ್ಪ ಅವರು ಎಂದರು.ರೈತರು ದೇಶದ ಬೆನ್ನೆಲುಬು ಎಂದು ಭಾಷಣ ಮಾಡುತ್ತೇವೆ. ಆದರೆ ದೇಶದ ರೈತರ ಪರಿಸ್ಥಿತಿ ಬದಲಾಗಿಲ್ಲ. ಕೃಷಿಯನ್ನು ಉದ್ಯಮವಾಗಿ ನೋಡುವ ಪ್ರಯತ್ನವಾಗಲಿಲ್ಲ. ಸರಿಯಾಗಿ ಮಳೆಯಾಗುತ್ತಿಲ್ಲ, ರೈತರು ಸಂಕಷ್ಟದಲ್ಲಿದ್ದಾರೆ. ಕಷ್ಟಪಟ್ಟುಬೀಜ,ಗೊಬ್ಬರ ಖರೀದಿಸಿ ಬಿತ್ತಿದರೆ ಮಳೆಯಾಗುತ್ತಿಲ್ಲ. ಸರಿಯಾಗಿ ಬೆಳೆ ಬಂದರೆ ಉತ್ತಮ ಬೆಲೆ ಸಿಗುವ ಗ್ಯಾರಂಟಿ ಇರುವುದಿಲ್ಲ. ಇಂಥ ಸಂದರ್ಭದಲ್ಲಿ ರೈತರಿಗೆ ಪ್ರತ್ಯೇಕ ಬಜೆಟ್ ಮಂಡಿಸಿದವರು ಯಡಿಯೂರಪ್ಪ ಎಂದು ತಿಳಿಸಿದರು

ಹುಬ್ಬಳ್ಳಿ ಮೂರುಸಾವಿರ ಮಠದ ಶ್ರೀ ಗುರುಸಿದ್ಧರಾಜಯೋಗೀಂದ್ರ ಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಮುಖ್ಯ ಅತಿಥಿಗಳಾಗಿ

ಶಾಸಕರ ಹೆಚ್.ಶ್ರೀನಿವಾಸ, ಜಿಲ್ಲಾಧಿಕಾರಿ ಶ್ರೀಮತಿ ಜಿ ಆರ್ ಜೆ ದಿವ್ಯಾಪ್ರಭು, ಭಾಗವಹಿಸಿದ್ದರು. ಇದೇ ಕಾರ್ಯಕ್ರಮದಲ್ಲಿ ಶಂಕರಘಟ್ಟ ಕುವೆಂಪು ವಿಶ್ವವಿಧ್ಯಾಲಯದ ಔದ್ಯೋಗಿಕ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ: ಬಿ.ಇ ಕುಮಾರಸ್ವಾಮಿ ಇವರನ್ನ ಅಭಿನಂದಿಸಲಾಯಿತು.

ಸಾಣೇಹಳ್ಳಿಯ ಶ್ರೀ ಶಿವಕುಮಾರ ರಂಗಪ್ರಯೋಗಶಾಲೆ ವಿಧ್ಯಾರ್ಥಿಗಳಿಂದ ಕಂಸಾಳೆ,ಶ್ರೀ ಶಿವಕುಮಾರ ಸ್ವಾಮೀಜಿ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಂದ ನೃತ್ಯರೂಪಕಗಳು ಜರುಗಿದವು ಕಾರ್ಯಕ್ರಮದ ನಂತರ ನಡೆದ

ನಾಟಕೋತ್ಸವದಲ್ಲಿ ಶಿವಮೊಗ್ಗ ಹೊಂಗಿರಣ ಅಭಿನಯದ ಚಂದ್ರು ಹೊಂಗಿರಣ ನಿರ್ದೇಶನದ ಶಿವಕುಮಾರ ಮಾವಲಿ ರಚನೆಯ ಒಂದು ಕಾನೂನಾತ್ಮಕ ಕೊಲೆ ಎಂಬ ನಾಟಕ ಅದ್ಭುತವಾಗಿಪ್ರದರ್ಶನಗೊಂಡು ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

## ಫಾಸ್ಟ್ ನ್ಯೂಸ್

### ಸಾಣೇಹಳ್ಳಿಯ ನಾಟಕೋತ್ಸವದಲ್ಲಿಂದು

» **ಹೊಸದುರ್ಗ**

ತಾಲೂಕಿನ ಸಾಣೇಹಳ್ಳಿಯ ಶ್ರೀ ಶಿವಕುಮಾರ ಬಯಲು ರಂಗ ಮಂದಿರದಲ್ಲಿ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮ್ಭಿಜಿಯವರ ನೇತೃತ್ವದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ನಾಟಕೋತ್ಸವದ ನ.7 ರಂದು ಮಂಗಳವಾರ ನಡೆಯಲಿರುವ ಕಾರ್ಯಕ್ರಮದಲ್ಲಿ ಹೂವಿನಹಡಗಲಿ ಗವಿಸಿದ್ದೇಶ್ವರ ವ್ಮಠದ ಡಾ:ಹಿರೇಶಾಂತವೀರ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು ಜಾನಪದ ಅಕಾಡೆಮಿಯ ಮಾಜಿ ಅಧ್ಯಕ್ಷ ಪಿಚ್ಚಳ್ಳಿ ಶ್ರೀನಿವಾಸ್ “ಕಲಾವಿದರ ಸ್ಥಿತಿ–ಗತಿ ಕುರಿತಂತೆ ವಿಷಯ ಮಂಡಿಲಸಲಿದ್ದಾರೆ ಮುಖ್ಯ ಅತಿಥಿಗಳಾಗಿ ಅರಣ್ಯ ಜೈವಿಕ ಹಾಗೂ ಪರಿಸರ ಇಲಾಖೆಯ ಸಚಿವ ಈಶ್ವರಖಂಡ್ರೆ, ಶಾಸಕ ಡಿ.ಜಿ.ಶಾಂತನಗೌಡ, ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷ ಪ್ರೋ:ಎಸ್. ಆರ್.ನಿರಂಜನ್, ಮಾಜಿ ಶಾಸಕರುಗಳಾದ ವಡ್ನಾಳ್‌ರಾಜಣ್ಣ, ಎಸ್.ವಿ.ರಾಮಚಂದ್ರ, ದಾವಣಗೆರೆ ಜಿಲ್ಲಾಧಿಕಾರಿ ಡಾ:ಎಂ.ವಿ.ವೆಂಕ ‘ಟೇಶ್,ಚಿಕ್ಕಮಗಳೂರಿನ ಉಪನ್ಯಾಸಕಿ ಶ್ರೀಮತಿ ನಾಗಶ್ರೀತ್ಯಾಗರಾಜ್ ಹಾಗೂ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಜೆ.ಆರ್.ಷಣ್ಮುಕಪ್ಪ ಭಾಗವಹಿಸಲಿದ್ದು ಇದೇ ಕಾರ್ಯಕ್ರಮದಲ್ಲಿ ದಾವಣಗೆರೆ ಬಾಪೂಜಿ ವಿದ್ಯಾಸಂಸ್ಥೆಯ ಆಡಳಿತ ಮಂಡಳಿಯ ಉಪಾಧ್ಯಕ್ಷೆ ಶ್ರೀಮತಿ ಕಿರುವಾಡಿಗಿರಿಜಮ್ಮ ಇವರನ್ನ ಅಭಿನಂದಿಸಲಾಗುವುದು. ಇದೇ ಕಾರ್ಯಕ್ರಮದಲ್ಲಿ ಶಿವನಕೆರೆಬಸವಲಿಂಗಪ್ಪ ಅವರ ನಿತ್ಯಾನಂದಕ್ಕೆ ನೀತಿ–ಪ್ರೀತಿ ಎಂಬ ಕೃತಿ ಲೋಕಾರ್ಪಣೆಗೊಳ್ಳಲಿದೆ. ಬೆಂಗಳೂರಿನ ನಾಟ್ಯವೇದ ನೃತ್ಯ ಶಾಲೆಯ ವಿದ್ಯಾರ್ಥಿಗಳಿಂದ ನೃತ್ಯ ರೂಪಕ ಜರುಗಲಿದ್ದು ಕಾರ್ಯಕ್ರಮದ ನಂತರ ನಡೆಯಲಿರುವ ನಾಟಕೋತ್ಸವದಲ್ಲಿ ಮೈಸೂರು ಜಿ ಪಿ ಐ ಇ ಆರ್ ರಂಗತಂಡದ ಮೈಮ್ ರಮೇಶ್ ವಿನ್ಯಾಸ ಮತ್ತು ನಿರ್ದೇಶನದ ಗಣೇಶ್‌ಅಮೀನಗಡ ರಚನೆಯ ಆಲ್ ರೈಟ್ ಮಂತ್ರ ಮಾಂಗಲ್ಯ ಎಂಬ ನಾಟಕ ಪ್ರದರ್ಶನಗೊಳ್ಳಲಿದೆ.

### ದೇಹಕ್ಕೆ ಬೇಕಾದ ಸೂಕ್ಷ್ಮ ಪೋಷಕಾಂಶ ಅಯೋಡಿನ್



» **ದಾವಣಗೆರೆ**

ಅಯೋಡಿನ್ ನಮ್ಮ ದೇಹಕ್ಕೆ ಬೇಕಾದ ಸೂಕ್ಷ್ಮ ಪೋಷಕಾಂಶ. ನಮ್ಮ ದಿನ ನಿತ್ಯದ ಆಹಾರದಲ್ಲಿ ತೆಗೆದುಕೊಳ್ಳಬೇಕು, ಥೈರಾಯ್ಡ್ ಗ್ರಂಥಿಯು ಸಮರ್ಪಕವಾಗಿ ನಿರ್ವಹಣೆ ಮಾಡಬೇಕಾದರೆ ಇದರ ಅವಶ್ಯಕತೆ ಅತಿಮುಖ್ಯವಾಗಿರುತ್ತದೆ ಎಂದು ದಾವಣಗೆರೆ ತಾಲೂಕು ಆರೋಗ್ಯಾಧಿಕಾರಿ ಡಾ.ದೇವರಾಜ ಪಿ.ಪಟಗೆ ಹೇಳಿದರು.

ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ವಿಶ್ವ ಆಯೋಡಿನ್ ಕೊರತೆಯ ನ್ಯೂನತೆಗಳ ನಿಯಂತ್ರಣ ದಿನಾಚರಣೆ ಹಾಗೂ ಸಪ್ತಾಹ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅಯೋಡಿನ್ ಅಂಶವು ಮುಖ್ಯವಾಗಿ ಗರ್ಭದಲ್ಲಿ ಮಗುವಿನ ಸಮರ್ಪಕ ಬೆಳವಣಿಗೆ ಮತ್ತು ಮಾನಸಿಕ, ದೈಹಿಕ ಬೆಳವಣಿಗೆಗೆ ಅತ್ಯಅವಶ್ಯಕ. ಸಮುದ್ರ ಆಹಾರಗಳಾದ ಮೀನು, ಸಿಗಡಿ ಹಾಗೂ ನೆಲದಲ್ಲಿ ಬೆಳೆಯುವ ಮೂಲಂಗಿ ಇನ್ನಿತರೆ ಬೆಳೆಗಳಲ್ಲಿ ಅಯೋಡಿನ್ ಅಂಶ ದೊರೆಯುತ್ತದೆ ಎಂದರು. ಅಯೋಡಿನ್ ಅಂಶವು ಕಡಿಮೆ ಆದರೆ ಗರ್ಭಿಣಿಯರಲ್ಲಿ ಹುಟ್ಟುವ ಮಗು ದೈಹಿಕ ಮತ್ತು ಮಾನಸಿಕ ವಿಕಲತೆ ಕಂಡು ಬರಬಹುದು. ಮೈ ಇಳಿತ, ಮಕ್ಕಳ ಬೆಳವಣಿಗೆಯಲ್ಲಿ ಕುಂಠಿತ, ಕಿವುಡುತನ, ಮೂಕತನ ಕಂಡು ಬರುತ್ತವೆ. ಅದರಲ್ಲೂ ಬೆಟ್ಟಗುಡ್ಡ, ಇಳಿಜಾರು ಪ್ರದೇಶ, ಅರಣ್ಯ, ನೆರೆಹಾವಳಿಗಳ ಪ್ರದೇಶದಲ್ಲಿ ಆಯೋಡಿನ್ ಅಂಶವು ಕಡಿಮೆ ಇಉತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಹೆಚ್. ಉಮಾಪತಿ, ಆರ್.ಲೋಕೇಶ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಟಿ.ಎಸ್.ವೆಂಕಟಾಚಲ ಕುಮಾರ, ಪಿ.ವಿ.ರವಿ.ಪಿ ಇತರರು ಇದ್ದರು.

### ಗ್ರಾಹಕರ ಕುಂದು ಕೊರತೆ ಸಭೆ ನ.7ಕ್ಕೆ

» **ಹೊಸಪೇಟೆ**

ಜೆಸ್ಕಾಂ ಬಳ್ಳಾರಿ ಕಾರ್ಯ ಮತ್ತು ಪಾಲನೆ ವಲಯದ ಮುಖ್ಯ ಅಭಿಯಂತರರ ಅಧ್ಯಕ್ಷತೆಯಲ್ಲಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಹೆಚ್.ಟಿ ಮತ್ತು ಇ.ಹೆಚ್.ಟಿ ಗ್ರಾಹಕರುಗಳ ಕುಂದು ಕೊರತೆ ಸಭೆಯನ್ನು ನ.7ರಂದು ಬೆಳಿಗ್ಗೆ 11 ಗಂಟೆಗೆ ಬಳ್ಳಾರಿ ವಲಯ ಕಚೇರಿಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಹೊಸಪೇಟೆ ನಗರ ಉಪವಿಭಾಗ–1 ಮತ್ತು 2ರ ಏರಿಯಾಗಳ ಗ್ರಾಹಕರು ಹಾಗೂ ಹೆಚ್.ಟಿ ಮತ್ತು ಇ.ಹೆಚ್.ಟಿ ಗ್ರಾಹಕರು ಈ ಸಭೆಗೆ ಹಾಜರಾಗಿ ತಮ್ಮ ಕುಂದುಕೊರತೆಗಳ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಬಹುದಾಗಿದೆ ಎಂದು ಜೆಸ್ಕಾಂ ಹೊಸಪೇಟೆ ನಗರ ಉಪವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಂಗಮಪ್ರೇಮಿ ಎಂದರೆ ಖಾವಿ ಹಾಕಿದವರಲ್ಲ ಆಚಾರ ಉಳ್ಳವರು ಜಂಗಮರು: ಸಾಣೇಹಳ್ಳಿಶ್ರೀ

» **ಹೊಸದುರ್ಗ**

ಜಂಗಮಪ್ರೇಮಿ ಎಂದರೆ ಖಾವಿ ಹಾಕಿದವರಲ್ಲ. ಅರಿವು, ಆಚಾರ ಉಳ್ಳವರು ಜಂಗಮರು. ಹೆಣ್ಣು ಕೂಡ ಜಂಗಮ ಆಗಬಹುದು, ಗಂಡು ಕೂಡ ಜಂಗಮವಾಗಬಹುದು. ಬಹುರೂಪಿ ಚೌಡಯ್ಯ ಹೇಳಿದಂತೆ ಪ್ರಸಾದಿ ಎಂದರೆ ಊಟವಲ್ಲ, ಜ್ಞಾನ. ಅಜ್ಞಾನಿಗಳ ಜೊತೆಗೆ ಒಡನಾಟ ಇಟ್ಟುಕೊಂಡರೆ ಅಜ್ಞಾನಿಗಳಾಗುತ್ತೇವೆ ಎಂದು ಸಾಣೇಹಳ್ಳಿ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ವ್ಯಾಖ್ಯಾನಿಸಿದರು.



ತಾಲೂಕಿನ ಸಾಣೆಹಳ್ಳಿಯಲ್ಲಿ ನಡೆಯುತ್ತಿರುವ ರಾಷ್ಟ್ರೀಯ ನಾಟಕೋತ್ಸವ ಅಂಗವಾಗಿ ಸೋಮವಾರ ಏರ್ಪಡಿಸಿದ್ದ ಚಿಂತನ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿದ್ದ ಅವರು ಆಶೀರ್ವಚನ ನೀಡಿದರು.

ಭಕ್ತಿ ಎಂದರೆ ಅಂತರಂಗ ಅರಳುವ ಪ್ರಕ್ರಿಯೆ. ಇದಕ್ಕೆ ವಿರುದ್ಧವಾಗಿರುವವರ ಕಂಡು ದೂರವಿರುವ ಹಾಗೆ ಮಾಡು. ಈ ಎಚ್ಚರವನ್ನು ಬಹುರೂಪಿ ಚೌಡಯ್ಯ ಹೇಳುತ್ತಾರೆ ಎಂದು ವಿವರಿಸಿದರು.

ದುರ್ಜನರನ್ನು ದೂರ ಮಾಡುವುದಲ್ಲ, ಅವರನ್ನೂ ಸಜ್ಜನರಾಗಿ ಬದಲಾಯಿಸಬೇಕು. ನಾವು ಸಜ್ಜನರಾಗುವುದಷ್ಟೇ ಮುಖ್ಯವಲ್ಲ, ಇನ್ನೊಬ್ಬರನ್ನೂ ಸಜ್ಜನರಾಗಿಸುವುದು ಬಹಳ ಮುಖ್ಯ. ಕಳ್ಳನನ್ನು, ವೇಶ್ಯೆಯನ್ನು ಶರಣರು ಬದಲಾಯಿಸಿದರು.ಸಜ್ಜನರಸಂಗಮಾಡುವುದಷ್ಟೇ ಅಲ್ಲ, ದುರ್ಜನರನ್ನು ಬದಲಾಯಿಸುವುದು ಮುಖ್ಯ. ಇಲ್ಲದಿದ್ದರೆ ದುರ್ಜನರೇ ಹೆಚ್ಚಾಗುತ್ತಾರೆ ಎಂದು ಎಚ್ಚರಿಸಿದರು.

ಬಸವಣ್ಣನವರು ಹೇಳಿದ ಹಾಗೆ ನುಡಿದರೆ ಮುತ್ತಿನ ಹಾರದಂತಿರಬೇಕು ಎನ್ನುವ ಹಾಗೆ ನಾವು ಆಡುವ ಮಾತುಗಳು ಇನ್ನೊಬ್ಬರ ಮನಸ್ಸಿನ ಸ್ವಚ್ಛತೆಗೆ ಕಾರಣವಾಗಬೇಕು. ಇದೇ ಅಂತರಂಗ ಶುದ್ಧಿ, ಇದೇ ಬಹಿರಂಗ ಶುದ್ಧಿ ಎಂದು ಬಸವಣ್ಣನವರು ಹೇಳಿದ ಹಾಗೆ ನಮ್ಮ ಅಂತರಂಗವನ್ನು ಶುಚಿ ಮಾಡಿಕೊಳ್ಳಬೇಕು. ಇದಕ್ಕಾಗಿ ಸೂಕ್ತ ವಾತಾವರಣವೂ ಬೇಕಾಗುತ್ತದೆ. ಎಚ್ಚರವೂ ಬೇಕಾಗುತ್ತದೆ. ಬಹುರೂಪಿ ಚೌಡಯ್ಯ ಹೇಳಿದಂತೆ ಸದಾಚಾರಿಗಳು, ಸನ್ಮಾರ್ಗದಲ್ಲಿ ಸಾಗುವವರ ಜೊತೆಗೆ ಸಾಗಬೇಕು ಎಂದರು.

‘ಸಜ್ಜನರ ಸಂಗ’ ಕುರಿತು ಅಧ್ಯಾಪಕಿ ಪಿ.ಎಲ್.ಸಂಧ್ಯಾ ಮಾತನಾಡಿ, ಯಾರೇ ಕೆಟ್ಟರೂ ಸಹವಾಸ ದೋಷದಿಂದ ಎಂದು ಹೇಳುತ್ತೇವೆ. ಇದಕ್ಕಾಗಿ ಸ್ನೇಹಸಂಗ ಮುಖ್ಯವಾಗುತ್ತದೆ. ಬೆಣ್ಣೆ ಮುಟ್ಟಿದರೆ ಬೆಣ್ಣೆಯಂತೆ, ಸುಣ್ಣ ಮುಟ್ಟಿದರೆ ಸುಣ್ಣದಂತೆ. ಅಂತರಂಗ ಹಾಗೂ ಬಹಿರಂಗ ಶುದ್ಧವಿರುವವರ ಸಂಗ ಒಳ್ಳೆಯದು ಎಂದರು.

ಶ್ರೀಮಂತನೊಬ್ಬ ತನ್ನ ಮಗನಿಗೆ ಸ್ವಲ್ಪ ಶ್ರೀಗಂಧ ಕೊಡುತ್ತಾನೆ. ಸ್ವಲ್ಪ ಸಮಯದ ನಂತರ ಕೈ ನೋಡು ಎನ್ನುತ್ತಾನೆ. ಆಗ ಸುಗಂಧದಿಂದ ಸುವಾಸನೆ ಬರುತ್ತದೆ. ಹಾಗೆಯೇ ಇದ್ದಿಲನ್ನು ಕೊಡುತಾನೆ. ಬಳಿಕ ಕೇಳಿದಾಗ ದುರ್ಗಂಧ ಹಾಗೂ ಕೈಗೆ ಮಸಿ ಅಂಟಿಕೊಳ್ಳುತ್ತದೆ. ಹೀಗೆಯೇ ನಮ್ಮ ಜೀವನ ಪಾವನ ಆಗಬೇಕಾದರೆ ಸಜ್ಜನರ ಸಂಗ ಮುಖ್ಯ. ಎಂದು ಹೇಳಿದರು.

ರಾಮಕ್ಕ ಎಂಬವಳು ತನ್ನ ಪಕ್ಕದ ಊರಿನ ಸಂತೆಯಲ್ಲಿ ಮೀನು ಮಾರಿ ಊರಿಗೆ ಹೊರಡುತ್ತಾಳೆ. ಆಗ ಮಳೆ ಬರುತ್ತದೆಂದು ಹೂವಿನ ಅಂಗಡಿಯ ಸೋಮಕ್ಕನ ಅಂಗಡಿಯಲ್ಲಿ ಉಳಿದುಕೊಳ್ಳಲು ಕೇಳುತ್ತಾಳೆ. ಆದರೆ ರಾಮಕ್ಕನಿಗೆ ಹೂವಿನ ಸುವಾಸನೆಯಿಂದ ನಿದ್ದೆಯೇ ಬರುವುದಿಲ್ಲ. ಆಗ ಮೀನಿನ ಬುಟ್ಟಿಯ ನೀರಿನಿಂದ ಮುಖ ತೊಳೆದುಕೊಂಡು ಮಲಗಿ ಗೊರಕೆ ಹೊಡೆಯುತ್ತಾಳೆ. ಅಂದರೆ ಸದಾ ದುರ್ಜನರ ಸಂಗ ಮಾಡುತ್ತಿದ್ದರೆ ಸಜ್ಜನರ ಸಂಗದ ಮಹತ್ವ ಗೊತ್ತಾಗುವುದಿಲ್ಲ. ಸರ್ವಜ್ಞ ಹೇಳಿದಂತೆ ಸಜ್ಜನರ ಸಂಗ ಹೆಜ್ಜೇನು ಸವಿದಂತೆ ಎನ್ನುವ ಹಾಗೆ ಒಳ್ಳೆಯವರ ಸಂಗವು ಹೆಜ್ಜೇನು ಸವಿದಂತೆ ಇಲ್ಲದಿದ್ದರೆ ಬಚ್ಚಲುಮನೆಯ ದುರ್ಗಂಧದಂತಾಗುತ್ತದೆ ಎಂದು ಅಭಿಪ್ರಾಯಪಟ್ಟರು. ಸಿದ್ಧರಾಮ ಕೇಸಾಪುರ, ಎಚ್.ಎಸ್.ನಾಗರಾಜ, ಕೆ.ಜ್ಯೋತಿ ವಚನಗಳನ್ನು ಹಾಡಿದರು. ಎನ್.ಸಿ.ದೀಪಾ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

## ಪುರಾಣ, ಪುಣ್ಯಕಥೆ, ಕಟ್ಟುಪಾಡುಗಳೇ
# ಕಾನೂನುಗಳ ಮೂಲ




» **ದಾವಣಗೆರೆ**

ನಮ್ಮ ಕಾನೂನುಗಳ ಮೂಲವೇ ನಮ್ಮ ಪುರಾತನ ಪುರಾಣ, ಪುಣ್ಯ ಕಥೆಗಳು. ಜೊತೆಗೆ ನಮ್ಮ ಹಿರಿಯರು ಹಾಕಿಕೊಟ್ಟ ಕಟ್ಟುಪಾಡುಗಳೇ ಇಂದು ಕಾನೂನುಗಳಾಗಿ ಮಾರ್ಪಟ್ಟಿವೆ ಎಂದು ದಾವಣಗೆರೆ ಜಿಲ್ಲಾ ಕಾನೂನು ಸೇವಾ ಅಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನಾಯಾಧೀಶರಾದ ಮಹಾವೀರ ಎಂ.ಕರೆಣ್ಣವರ್ ಹೇಳಿದರು.ನಗರದ ರೋಟರಿ ಬಾಲ ಭವನದಲ್ಲಿ ಶ್ರೀಮಹರ್ಷಿ ವಾಲ್ಮೀಕಿ ಪ್ರತಿಷ್ಠಾನ ದಾವಣಗೆರೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ದಾವಣಗೆರೆ ಇವರ ಸಂಯುಕ್ತ ಆಶ್ರಯದಲ್ಲಿ ಕಾನೂನು ಸೇವಾ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ ಕಾನೂನು ನೆರವು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.ಬಾಲ್ಯ ವಿವಾಹ, ಅಪ್ರಾಪ್ತರ ಮೇಲೆ ಲೈಂಗಿಕ ದೌರ್ಜನ ಸೇರಿದಂತೆ ಇನ್ನೂ ಹಲವಾರು ಪಿಡುಗುಗಳು ಇನ್ನೂ ನಮ್ಮ ಸಮಾಜದಲ್ಲಿ ಬೇರೂರಿವೆ. ಇಂಥವುಗಳನ್ನು ತೊಡೆದು ಹಾಕಬೇಕಾಗಿದೆ. ಸಮಾಜಕ್ಕೆ ಕಂಟಕವಾಗಿರುವ ಇಂತಹ ಸಾಮಾಜಿಕ ಪಿಡುಗುಗಳನ್ನು ನಿವಾರಿಸಲೆಂದು ತಜ್ಞರ ಅಭಿಪ್ರಾಯಗಳನ್ನು ಪಡೆದು ಕಾನೂನುಗಳನ್ನು ರೂಪಿಸಲಾಗುತ್ತದೆ ಕಾನೂನುಗಳನ್ನ ಬೇಕಾಬಿಟ್ಟಿ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು.ಅದರಲ್ಲೂ ಇಂದಿನ ನಮ್ಮ ಪೂರ್ಣ ಕಥೆಗಳಲ್ಲಿ ಬರುವ ಪಾತ್ರಗಳು ಇಂದಿನ ಸಮಾಜದಲ್ಲಿ ಬರುವ ಪಾತ್ರಗಳಾಗಿವೆ. ರಾಮ, ಸೀತೆ, ರಾವಣ ಎಲ್ಲವೂ ನಮ್ಮ ಸಮಾಜದಲ್ಲಿ ನಮ್ಮ ಕಾನೂನಿನಲ್ಲಿ ಬಂದು ಹೋಗುವ ಪಾತ್ರಗಳೆ ಎಂದು ಹೇಳಿದರು. ಮುಖ್ಯ ಅತಿಥಿಯಾಗಿ ಆಗಮಿಸಿದ್ದ ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್ ಕುಮಾರ್ ಮಾತನಾಡಿ, ದೇಶದಲ್ಲಿ ಬಹುತೇಕ ಅದರಲ್ಲೂ ಯುವ ಜನತೆ, ವಿದ್ಯಾರ್ಥಿಗಳು ಕಾನೂನಿನ ಬಗ್ಗೆ ಸರಿಯಾದ ಮಾಹಿತಿ ಪಡೆದಿರುವುದಿಲ್ಲ. ಇದರಿಂದಾಗಿ ಅವರು ಕೆಲವೊಮ್ಮೆ ಸಂಕಷ್ಟಗಳಿಗೆ ಸಿಲುಕುತ್ತಾರೆ. ಆದರೆ ಆ ವೇಳೆ ನಮಗೆ ಕಾನೂನು ಗೊತ್ತಿಲ್ಲ ಎಂದು ಹೇಳಲು ಸಾಧ್ಯವಿಲ್ಲ.

## ಪ್ರಮುಖ ಸುದ್ದಿ

# ಆಯುಷ್ ಪದ್ದತಿಯಿಂದ ಮಾನಸಿಕ, ದೈಹಿಕ ಆರೋಗ್ಯ ಕಾಪಾಡಬಹುದು

» **ದಾವಣಗೆರೆ**

ಭಾರತದ ಪುರಾತನ ವೈದ್ಯ ಪದ್ಧತಿಯಾದ ಆಯುಷ್‌ನಿಂದ ಸಂಕ್ರಾಮಿಕ, ಮಾರಕ ರೋಗಗಳನ್ನು ಕಡಿಮೆ ಮಾಡುವ ಜತೆ ಜನರ ಮಾನಸಿಕ, ದೈಹಿಕ ಆರೋಗ್ಯ ಕಾಪಾಡಬಹುದು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಶಂಕರ್‌ಗೌಡ ತಿಳಿಸಿದರು.

2023–24ನೇ ಸಾಲಿನ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ. ಯೋಜನೆಯಡಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ದಾವಣಗೆರೆ, ಜಿಲ್ಲಾ ಆಯುಷ್ ಇಲಾಖೆ, ಚಿಗಟೇರಿ ಸಾರ್ವಜನಿಕ ಆಸ್ಪತ್ರೆ, ಆಯುಷ್ ವಿಭಾಗ, ಹೋಮಿಯೋಪತಿ ಘಟಕ, ದಾವಣಗೆರೆ, ದಾವಣಗೆರೆ ತಾಲೂಕಿನ ಕನಗೊಂಡನಹಳ್ಳಿ, ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ ಇವರ ಸಂಯುಕ್ತಾಶ್ರಯದಲ್ಲಿ ಹೊಸ ಕುಂದವಾಡ ಗ್ರಾಮದಲ್ಲಿ

ಆಯೋಜಿಸಲಾಗಿದ್ದ ಆಯುಷ್ ಸೇವಾಗ್ರಾಮ ಉದ್ಘಾಟನೆ ನೆರವೇರಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.



ಆಧುನಿಕ ಔಷಧಿ ಪದ್ದತಿಗಳು ರೋಗಗಳಿಗೆ ಪರಿಣಾಮಕಾರಿಯಾಗಿ ಚಿಕಿತ್ಸೆ ನೀಡುತ್ತವೆಯಾದರೂ, ಅನೇಕ ಅಡ್ಡ ಪರಿಣಾಮಗಳನ್ನು ಹೊಂದಿವೆ, ಅದಕ್ಕಾಗಿಯೇ ಆಯುಷ್ ಪದ್ದತಿಗಳನ್ನು ಬಳಸಿಕೊಂಡು ರೋಗ ಪರಿಹಾರಗಳನ್ನು ಕಂಡುಹಿಡಿಯಲು ಹಲವಾರು ಅಧ್ಯಯನ ನಡೆಸಲಾಗಿದ್ದು, ಯಶಸ್ಸು ದೊರೆತಿವೆ. ಇತ್ತೀಚಿನ ದಿನಗಳಲ್ಲಿ ಆಯುಷ್ ಜನರ ಜೀವನ ಪದ್ದತಿಯಾಗುತ್ತಿದೆ ಎಂದು ಹೇಳಿದರು. ಗ್ರಾಮದ ಮುಖಂಡ ಮಹೇಶ್ವರಪ್ಪ ಬೊಮ್ಮಜ್ಜರ್ ಮಾತನಾಡಿ, ಕಳೆದ ವರ್ಷವೂ ಈ ಕಾರ್ಯಕ್ರಮ ಇದೇ ಗ್ರಾಮದಲ್ಲಿ ಮತ್ತೊಂದು ಭಾಗದಲ್ಲಿ ಆಯೋಜಿಸಲಾಗಿತ್ತು. ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಶಂಕರಗೌಡ ಅವರಲ್ಲಿ ಮನವಿ ಮಾಡಿದ ನಂತರ ಇದೀಗ ಕಾರ್ಯಕ್ರಮ ನಡೆದಿದೆ. ಗ್ರಾಮಸ್ಥರು ಹೆಚ್ಚು ಉಪಯೋಗ ಪಡೆಯಿರೆಂದು ಕರೆ ನೀಡಿದರು. ಗ್ರಾಮದ ಮುಖಂಡ ಅಣ್ಣಪ್ಪ ಅರಿಶಿಣಘಟ್ಟ, ಆರೋಗ್ಯ ನಿರೀಕ್ಷಣಾಧಿಕಾರಿ ಬಿ.ಒ.ಸಂತೋಷ್, ಡಾ.ಕೃಷ್ಣ ಶೃಂಗಾರತೋಟ, ಡಾ.ಎಸ್. ಎಸ್.ಅನುರಾಧ, ಡಾ.ಮಲ್ಲಿಕಾರ್ಜುನ್ ಬೂದಿಹಾಳ್, ಡಾ.ಬಿ.ಹೆಚ್. ದ್ಯಾವನಗೌಡರ್, ಬಿಸನಳ್ಳಿ ರೋಗಿಗಳ ತಪಾಸಣೆ ನಡೆಸಿದರು. ಈ ವೇಳ ದೊಡ್ಡಬಾತಿ ಪಿಹೆಚ್‌ಸಿಯ ಸಿಬ್ಬಂದಿ, ಆಶಾ ಕಾರ್ಯಕರ್ತೆ ಮಂಜುಳಮ್ಮ, ಸರ್ವಮಂಗಳ, ಅಂಗನವಾಡಿ ಕಾರ್ಯಕರ್ತೆಯರು ಇದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T